ಸಂಪುಟ 01 । ಸಂಚಿಕೆ 210 ಭಾನುವಾರ 04 ಅಕ್ಟೋಬರ್ 2026 । ಪುಟ 4 । ಬೆಲೆ–2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1)ವಿಶ್ವ ಪ್ರಾಣಿ ದಿನ (World Animal Day)
ಪ್ರಾಣಿಗಳ ಕಲ್ಯಾಣ, ರಕ್ಷಣೆ ಮತ್ತು ಅವುಗಳ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಲು ಪ್ರತಿವರ್ಷ ಅಕ್ಟೋಬರ್ 4ರಂದು ಆಚರಿಸಲಾಗುತ್ತದೆ.

2)ವಿಶ್ವ ಬಾಹ್ಯಾಕಾಶ ವಾರದ ಆರಂಭ (World Space Week)
ಅಕ್ಟೋಬರ್ 4ರಿಂದ 10ರವರೆಗೆ ನಡೆಯುವ ವಿಶ್ವ ಬಾಹ್ಯಾಕಾಶ ವಾರವು ಬಾಹ್ಯಾಕಾಶ ವಿಜ್ಞಾನ ಮತ್ತು ತಂತ್ರಜ್ಞಾನದ ಮಹತ್ವವನ್ನು ಪರಿಚಯಿಸುತ್ತದೆ.

ಸುಭಾಷಿತ

ಮನುಷ್ಯನಲ್ಲಿರುವ ಪರಿಪೂರ್ಣತೆಯನ್ನು ಹಿಗ್ಗಿಸುವುದೇ ನಿಜವಾದ ಶಿಕ್ಷಣ.

–ಸ್ವಾಮಿ ವಿವೇಕಾನಂದ

ವಿಶ್ವವಿಖ್ಯಾತ ಮೈಸೂರು ದಸರಾ ಉತ್ಸವಕ್ಕೆ ಮೈಸೂರು ಜಿಲ್ಲಾಡಳಿತದ ವತಿಯಿಂದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಆಹ್ವಾನ

❑ ನೈಜ್ಯ ದೇಸೆ ನ್ಯೂಸ್

ತಾಂಡವಪುರ: ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವ ಕಾರ್ಯಕ್ರಮಕ್ಕೆ ಭಾಗವಹಿಸುವಂತೆ ಮೈಸೂರು ಜಿಲ್ಲಾಡಳಿತ ವತಿಯಿಂದ ಬೆಂಗಳೂರಿನ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನಿವಾಸದಲ್ಲಿ ಸಿದ್ದರಾಮಯ್ಯನವರನ್ನು ಭೇಟಿ ಮಾಡಿ ಆಹ್ವಾನ ಪತ್ರಿಕೆ ನೀಡಿ ಕೋರಿಕೊಂಡರು ಮಾಜಿ ಮುಖ್ಯಮಂತ್ರಿಗಳಾದ



ಸಿದ್ದರಾಮಯ್ಯನವರ ತವರು ಕ್ಷೇತ್ರ ಮೈಸೂರು ಜಿಲ್ಲೆಯಲ್ಲಿ ನಡೆಯುತ್ತಿರುವ ಐತಿಹಾಸಿಕ ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಕಾರ್ಯಕ್ರಮಗಳು ಬಹಳ ಅಚ್ಚುಕಟ್ಟಾಗಿ ಹೊಸತರದ ವಿನೂತನ ಕಾರ್ಯಕ್ರಮಗಳನ್ನು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದು ಈಗಾಗಲೇ ದಸರಾ ಕಾರ್ಯಕ್ರಮಗಳು ಶುರುವಾಗಿದ್ದು ದಸರಾ ಉದ್ಘಾಟನೆ ಕಾರ್ಯಕ್ರಮಗಳಿಗೆ ಭಾಗವಹಿಸುವಂತೆ ಮಾಜಿ ಮುಖ್ಯಮಂತ್ರಿ ಮೈಸೂರು ಜಿಲ್ಲೆಯವರೆ ಆದ ಸಿದ್ದರಾಮಯ್ಯ ಅವರನ್ನು ಮೈಸೂರು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಭೇಟಿ ಮಾಡಿ ದಸರಾ ಉತ್ಸವದಲ್ಲಿ ಪಾಲ್ಗೊಳ್ಳಬೇಕೆಂದು ವಿನಂತಿಸಿದರು ಈ ಸಂದರ್ಭದಲ್ಲಿ ಮೈಸೂರು ಜಿಲ್ಲಾಧಿಕಾರಿಗಳಾದ ಜಿ ಲಕ್ಷ್ಮಿಕಾಂತ್ ರೆಡ್ಡಿ ಹಾಗೂ ಮಹಿಳಾ ಅಧಿಕಾ–ರಿಗಳು ಮುಂತಾದವರು ಈ ಸಂದರ್ಭದಲ್ಲಿ ಹಾಜರಿದ್ದರು

ಶ್ರೀ ಕನಕದಾಸ ಶಿಕ್ಷಣ ಸಂಸ್ಥೆಯ ವತಿಯಿಂದ ವಿಶ್ವ ಹೃದಯ ದಿನಾಚರಣೆ

"ಪ್ರತಿದಿನ ನಡೆಯೋಣ, ಹೃದಯವನ್ನು ಕಾಪಾಡೋಣ ಆರೋಗ್ಯಕರ ಸಿಂಧನೂರನ್ನು ನಿರ್ಮಿಸೋಣ": ಕೆ. ವಿರುಪಾಕ್ಷಪ್ಪ

❑ ನೈಜ್ಯ ದೇಸೆ ನ್ಯೂಸ್

ಸಿಂಧನೂರು: ಶ್ರೀ ಕನಕದಾಸ ಸಮೂಹ ಶಿಕ್ಷಣ ಸಂಸ್ಥೆಗಳ ವತಿಯಿಂದ ವಿಶ್ವ ಹೃದಯ ದಿನದ ಅಂಗವಾಗಿ ``HEARTOTHON World Heart Day 2026'' ಎಂಬ ವಿಶೇಷ ಹೃದಯ ಆರೋಗ್ಯ ಜಾಗೃತಿ ಕಾರ್ಯಕ್ರಮವನ್ನು ಸೆಪ್ಟೆಂಬರ್ 29ರಂದು ಸಿಂಧನೂ–ರಿನಲ್ಲಿ ಅತ್ಯಂತ ಯಶಸ್ವಿಯಾಗಿ ಆಯೋಜಿಸಲಾಯಿತು.

ಸಾರ್ವಜನಿಕರಲ್ಲಿ ಹೃದಯದ ಆರೋಗ್ಯದ ಮಹತ್ವದ ಕುರಿತು ಅರಿವು ಮೂಡಿಸುವುದು, ಹೃದಯ ಸಂಬಂಧಿತ ಕಾಯಿಲೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವಂತೆ ಪ್ರೇರೇಪಿಸುವುದು ಹಾಗೂ ನಿಯಮಿತ ದೈಹಿಕ ಚಟುವಟಿಕೆಗಳ ಅಗತ್ಯತೆಯನ್ನು ತಿಳಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿತ್ತು. ವಿಶ್ವ ಹೃದಯ ದಿನದ ಅಂಗವಾಗಿ ಆಯೋಜಿಸಲಾಗಿದ್ದ ಊಜಚಿಡಿಣ ಫಾಚಿಟಇ, ಊಜಚಿಡಿಣ ಖಿಣಾಟಿ ಹಾಗೂ ಮ್ಯಾರಥಾನ್ ಕಾರ್ಯಕ್ರಮದಲ್ಲಿ ವಿವಿಧ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಉಪನ್ಯಾಸಕರು, ಸಿಬ್ಬಂದಿ, ವೈದ್ಯರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡರು. ತಹಶೀಲ್ದಾರ್ ಕಚೇರಿಯಿಂದ ಶ್ರೀ ಕನಕದಾಸ ಡಿಗ್ರಿ ಕಾಲೇಜಿನವರೆಗೆ ನಡೆದ ಹೃದಯ ಆರೋಗ್ಯ ಜಾಗೃತಿ ನಡಿಗೆ ಹಾಗೂ ಮ್ಯಾರಥಾನ್ ಸಾರ್ವಜನಿಕರ ಗಮನ ಸೆಳೆಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಕನಕದಾಸ ಸಮೂಹ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿಗಳಾದ ಕುಮಾರಿ ಚೈತ್ರಾ ಮೇಡಂ ಅವರು ವಹಿಸಿದ್ದರು. ಕಾರ್ಯಕ್ರಮವನ್ನು ಶ್ರೀ ಕನಕದಾಸ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರು ಹಾಗೂ ಮಾಜಿ ಸಂಸದರಾದ ಕೆ. ವಿರುಪಾಕ್ಷಪ್ಪ ಸರ್ ಅವರು ಉದ್ಘಾಟಿಸಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕೆ. ವಿರುಪಾಕ್ಷಪ್ಪ ಅವರು, "ಆರೋಗ್ಯವೇ ಮಹಾಭಾಗ್ಯ. ಮನುಷ್ಯನ ಜೀವನದಲ್ಲಿ ಆರೋಗ್ಯಕ್ಕಿಂತ ದೊಡ್ಡ ಸಂಪತ್ತು ಮತ್ತೊಂದಿಲ್ಲ. ಇಂದಿನ ವೇಗದ ಜೀವನಶೈಲಿ, ಒತ್ತಡ, ಅಸಮರ್ಪಕ ಆಹಾರ ಪದ್ಧತಿ ಹಾಗೂ ದೈಹಿಕ ಚಟುವಟಿಕೆಯ ಕೊರತೆಯಿಂದ ಅನೇಕ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು" ಎಂದು ಹೇಳಿದರು.

ಹೃದಯವನ್ನು ಆರೋಗ್ಯವಾಗಿಟ್ಟುಕೊಳ್ಳಲು ಪ್ರತಿದಿನ ನಿಯಮಿತವಾಗಿ ವ್ಯಾಯಾಮ ಮಾಡುವುದು, ಸಾಧ್ಯವಾದಷ್ಟು ನಡೆದುಕೊಳ್ಳುವುದು, ಪೌಷ್ಟಿಕ ಆಹಾರ ಸೇವಿಸುವುದು, ಅತಿಯಾದ ಎಣ್ಣೆ ಮತ್ತು ಜಂಕ್‌ಫುಡ್ ಸೇವನೆಯನ್ನು ನಿಯಂತ್ರಿಸುವುದು ಹಾಗೂ ಉತ್ತಮ ಜೀವನಶೈಲಿಯನ್ನು ರೂಢಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ಅವರು ತಿಳಿಸಿದರು. ವಿದ್ಯಾರ್ಥಿಗಳು ಚಿಕ್ಕ ವಯಸ್ಸಿನಿಂದಲೇ ಆರೋಗ್ಯದ ಬಗ್ಗೆ ಜಾಗೃತರಾಗಬೇಕು ಎಂದು ಕರೆ ನೀಡಿದರು.



ಪ್ರತಿದಿನ 15ರಿಂದ 30 ನಿಮಿಷ ದೈಹಿಕ ಚಟುವಟಿಕೆ ಅಗತ್ಯ

ಕಾರ್ಯಕ್ರಮದಲ್ಲಿ ಮಾತನಾಡಿದ ಡಾ. ಬಿ.ಎನ್. ಪಾಟೀಲ್ ಅವರು ವಿಶ್ವ ಹೃದಯ ದಿನದ ಮಹತ್ವವನ್ನು ವಿವರಿಸಿದರು. ಹೃದಯವು ನಮ್ಮ ದೇಹದ ಪ್ರಮುಖ ಅಂಗವಾಗಿದ್ದು, ಅದರ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

"ಹೃದಯದ ಆರೋಗ್ಯಕ್ಕಾಗಿ ಪ್ರತಿದಿನ ಕನಿಷ್ಠ 15ರಿಂದ 30 ನಿಮಿಷಗಳ ಕಾಲ ನಡೆಯುವುದು, ವ್ಯಾಯಾಮ ಮಾಡುವುದು ಅಥವಾ ಯಾವುದೇ ರೀತಿಯ ದೈಹಿಕ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವುದು ಉತ್ತಮ ಅಭ್ಯಾಸವಾಗಿದೆ. ಆರೋಗ್ಯಕರ ಆಹಾರ ಪದ್ಧತಿ, ನಿಯಮಿತ ವ್ಯಾಯಾಮ ಮತ್ತು ಒತ್ತಡವನ್ನು ನಿಯಂತ್ರಿಸುವ ಜೀವನಶೈಲಿಯನ್ನು ಅಳವಡಿಸಿಕೊಂಡರೆ ಹೃದಯ ಸಂಬಂಧಿತ ಅನೇಕ ಸಮಸ್ಯೆಗಳನ್ನು ತಡೆಗಟ್ಟಲು ಸಾಧ್ಯ" ಎಂದು ಅವರು ಸಲಹೆ ನೀಡಿದರು. ಯುವಜನರು ತಮ್ಮ ದಿನಚರಿಯಲ್ಲಿ ದೈಹಿಕ ಚಟುವಟಿಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮೊಬೈಲ್ ಹಾಗೂ ಡಿಜಿಟಲ್ ಸಾಧನಗಳ ಬಳಕೆಯಲ್ಲಿ ಹೆಚ್ಚು ಸಮಯ ಕಳೆಯುವುದನ್ನು ಕಡಿಮೆ ಮಾಡಿ, ಕ್ರೀಡೆ, ನಡಿಗೆ ಹಾಗೂ ವ್ಯಾಯಾಮದಂತಹ ಚಟುವಟಿ–ಕೆಗಳಲ್ಲಿ ಭಾಗವಹಿಸುವಂತೆ ಅವರು ಕರೆ ನೀಡಿದರು.

``Every Step Counts, Every Heart Matters''

``Every Step Counts. Every Heart Matters'' ಎಂಬ ಅರ್ಥಪೂರ್ಣ ಸಂದೇಶದೊಂದಿಗೆ ನಡೆದ HEARTOTHON ಕಾರ್ಯಕ್ರಮದಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉತ್ಸಾಹದಿಂದ ಪಾಲ್ಗೊಂಡರು.

ಮ್ಯಾರಥಾನ್ ಹಾಗೂ ಹೃದಯ ಆರೋಗ್ಯ ಜಾಗೃತಿ ನಡಿಗೆಯ ಸಂದರ್ಭದಲ್ಲಿ ವಿದ್ಯಾರ್ಥಿಗಳು ಆರೋಗ್ಯದ ಮಹತ್ವ ಸಾರುವ ಘೋಷಣೆಗಳನ್ನು ಕೂಗುತ್ತಾ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಆರೋಗ್ಯಕರ ಜೀವನಶೈಲಿ, ನಿಯಮಿತ ನಡಿಗೆ, ವ್ಯಾಯಾಮ ಮತ್ತು ಹೃದಯದ ಆರೈಕೆಯ ಕು–ರಿತು ಸಾರ್ವಜನಿಕರಿಗೆ ಸಂದೇಶ ನೀಡಲಾಯಿತು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಕ್ಷೇತ್ರದ ಗಣ್ಯರು ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ಭಾಗವಹಿಸಿ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಆರೋಗ್ಯದ ಕುರಿತು ಅಗತ್ಯವಾದ ಮಾರ್ಗದರ್ಶನ ನೀಡಿದರು.

ಗಣ್ಯರ ಉಪಸ್ಥಿತಿ ಕಾರ್ಯಕ್ರಮದಲ್ಲಿ ಡಾ. ಅನಿಲ್, ಡಾ. ರವಿ, ಡಾ. ಚನ್ನನ್ ಗೌಡ, ಡಾ. ಸುಬ್ಬರಾವ್, ಡಾ. ಮಲ್ಲಿಕಾರ್ಜುನ್ ಹಾಗೂ ಸಾಯಿ ಅಮೈರಾ ಆಸ್ಪತ್ರೆಯ ಪ್ರತಿನಿಧಿಗಳು, ಸರ್ಕಾರಿ ಕಾಲೇಜಿನ ದೈಹಿಕ ಶಿಕ್ಷಣ ಶಿಕ್ಷಕರಾದ ಶಿವು ಸರ್, ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್‌ನ ಪ್ರಾಂಶುಪಾಲರಾದ ಲಾಜರ್ ಸಿರಿಲ್, ರೇಣುಕಾ ಕಾಲೇಜ್ ಆಫ್ ನರ್ಸಿಂಗ್‌ನ ಪ್ರಾಂಶುಪಾಲರಾದ ಡಾ. ಹಾಲೇಶ್, ಬಸವೇಶ್ವರ ಕಾಲೇಜಿನ ಪ್ರಾಂಶುಪಾಲರು ಸೇರಿದಂತೆ ವಿವಿಧ ಶಿಕ್ಷಣ ಸಂಸ್ಥೆಗಳ ಪ್ರಾಂಶುಪಾಲರು, ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿವಿಧ ಶಿಕ್ಷಣ ಸಂಸ್ಥೆಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಹೃದಯ ಆರೋಗ್ಯದ ಮಹತ್ವವನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು.

ಆರೋಗ್ಯಕರ ಜೀವನಶೈಲಿಗೆ ಕರೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕುಮಾರಿ ಚೈತ್ರಾ ಮೇಡಂ ಅವರು ಮಾತನಾಡಿ, ವಿಶ್ವ ಹೃದಯ ದಿನದ ಅಂಗವಾಗಿ ಆಯೋಜಿಸಿರುವ ಊಇಂಖಖಿಔ–ಖಿಊಔಓ ಕಾರ್ಯಕ್ರಮಕ್ಕೆ ಸ್ಪಂದಿಸಿ ಭಾಗವಹಿಸಿದ ಎಲ್ಲಾ ಗಣ್ಯರು, ವೈದ್ಯರು, ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಗೆ ಕೃತಜ್ಞತೆ ಸಲ್ಲಿಸಿದರು. ಇಂತಹ ಆರೋಗ್ಯ ಜಾಗೃತಿ ಕಾರ್ಯಕ್ರಮಗಳು ಕೇವಲ ಒಂದು ದಿನಕ್ಕೆ ಸೀಮಿತವಾಗದೆ, ಪ್ರತಿಯೊಬ್ಬರ ದೈನಂದಿನ ಜೀವನದ ಭಾಗವಾಗಬೇಕು. ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವುದರ ಜೊತೆಗೆ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಜನರನ್ನು ಪ್ರೇರೇಪಿಸುವುದು ಇಂತಹ ಕಾರ್ಯಕ್ರಮಗಳ ಮುಖ್ಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಯುವಜನರಲ್ಲಿ ಆರೋಗ್ಯದ ಕು–ರಿತು ಜಾಗೃತಿ ಮೂಡಿಸುವ ಮೂಲಕ ಉತ್ತಮ ಮತ್ತು ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಶಿಕ್ಷಣ ಸಂಸ್ಥೆಗಳು ನಿರಂತರವಾಗಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಅವರು ಹೇಳಿದರು. "ಪ್ರತಿದಿನ ನಡೆಯೋಣ, ಹೃದಯವನ್ನು ಕಾಪಾಡೋಣ ಆರೋಗ್ಯಕರ ಸಿಂಧನೂರನ್ನು ನಿರ್ಮಿಸೋಣ" ಎಂಬ ಸಂದೇಶದೊಂದಿಗೆ ನಡೆದ ಈ HEARTOTHON World Heart Day 2026 ಕಾರ್ಯಕ್ರಮವು ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಲ್ಲಿ ಹೃದಯದ ಆರೋಗ್ಯದ ಕು–ರಿತು ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾಯಿತು.







ಸನ್ ರೈಸ್ ಕಾಲೇಜಿನ ಶನಿವಾರದ ವಿಶೇಷ ಉಪನ್ಯಾಸ ನೀಡಿದ ಡಾ. ರವಿ ದಾನಿ

"ವೈದ್ಯಕೀಯ ಕ್ಷೇತ್ರದ ಯಶಸ್ಸಿಗೆ ಆತ್ಮವಿಶ್ವಾಸ, ಕೌಶಲ್ಯ ಹಾಗೂ ಸೇವಾ ಮನೋಭಾವ ಅಗತ್ಯ"


❑ ನೈಜ್ಯ ದೇಸೆ ನ್ಯೂಸ್

ಸಿಂಧನೂರು: ವೈದ್ಯಕೀಯ ಕ್ಷೇತ್ರದಲ್ಲಿ ವೃತ್ತಿಪರ ಯಶಸ್ಸು ಸಾಧಿಸಲು ಕೇವಲ ಶೈಕ್ಷಣಿಕ ಜ್ಞಾನವಷ್ಟೇ ಸಾಕಾಗುವುದಿಲ್ಲ. ಅದರೊಂದಿಗೆ ಅಗತ್ಯವಾದ ಕೌಶಲ್ಯಗಳು, ಆತ್ಮವಿಶ್ವಾಸ, ಸಂವಹನ ಸಾಮರ್ಥ್ಯ, ರೋಗಿಗಳೊಂದಿಗೆ ಮಾನವೀಯ ಸಂಬಂಧ ಹಾಗೂ ಸೇವಾ ಮನೋಭಾವವನ್ನು ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯ ಎಂದು ಕಾರಟ–ಗಿಯ ಡಾ. ದಾನಿ ಕ್ಲಿನಿಕ್‌ನ ಖ್ಯಾತ ಕುಟುಂಬ ತಜ್ಞರು, ಹಿರಿಯ ಸಲಹೆಗಾರರು ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ಡಾ. ರವಿ ದಾನಿ ಅವರು ಹೇಳಿದರು.

ನಗರದ ಸನ್ ರೈಸ್ ಡಿ–ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜು ವತಿಯಿಂದ ಪ್ರತೀ ಶನಿವಾರ ಆಯೋಜಿಸಲಾಗುತ್ತಿರುವ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್‌ನ ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಂಗವಾಗಿ ಅಕ್ಟೋಬರ್ 3, 2026ರ ಶನಿವಾರ ನಡೆದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು "ವೈದ್ಯಕೀಯ ಕ್ಷೇತ್ರದಲ್ಲಿ ಯಶಸ್ಸಿನತ್ತ ಕೊಂಡೊಯ್ಯುವ ಕೌಶಲ್ಯಗಳ ಅಭಿವೃದ್ಧಿ" ಎಂಬ ವಿಷಯದ ಕು–ರಿತು ವಿದ್ಯಾರ್ಥಿಗಳಿಗೆ ಉಪನ್ಯಾಸ ನೀಡಿದರು.

ವೈದ್ಯಕೀಯ ಮತ್ತು ಆರೋಗ್ಯ ಸೇವಾ ಕ್ಷೇತ್ರವು ಅತ್ಯಂತ ಜವಾಬ್ದಾರಿಯುತ ಕ್ಷೇತ್ರವಾಗಿದ್ದು, ಇಲ್ಲಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬರೂ ತಮ್ಮ ವೃತ್ತಿಪರ ಜ್ಞಾನವನ್ನು ನಿರಂತರವಾಗಿ ವೃದ್ಧಿಸಿಕೊಳ್ಳುವುದರ ಜೊತೆಗೆ ವಿವಿಧ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಡಾ. ರವಿ ದಾನಿ ಅವರು ತಿಳಿಸಿದರು. ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಅವಧಿಯಲ್ಲಿಯೇ ಸಂವಹನ ಕೌಶಲ್ಯ, ಸಮಯ ನಿರ್ವಹಣೆ, ತಂಡದೊಂದಿಗೆ ಕೆಲಸ ಮಾಡುವ ಸಾಮರ್ಥ್ಯ, ನಾಯಕತ್ವ ಗುಣ,





ಸಮಸ್ಯೆಗಳನ್ನು ಪರಿಹರಿಸುವ ಸಾಮರ್ಥ್ಯ, ನಿರ್ಧಾರ ತೆಗೆದುಕೊಳ್ಳುವ ಕೌಶಲ್ಯ ಹಾಗೂ ರೋಗಿಗಳೊಂದಿಗೆ ಸೌಹಾರ್ದಯುತವಾಗಿ ವರ್ತಿಸುವ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ನರ್ಸಿಂಗ್ ಕ್ಷೇತ್ರದಲ್ಲಿ ಸೇವಾ ಮನೋಭಾವ ಮುಖ್ಯ ನರ್ಸಿಂಗ್ ವೃತ್ತಿಯ ಮಹತ್ವದ ಕುರಿತು ಮಾತನಾಡಿದ ಡಾ. ರವಿ ದಾನಿ ಅವರು, ವೈದ್ಯಕೀಯ ಕ್ಷೇತ್ರದಲ್ಲಿ ನರ್ಸ್‌ಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ರೋಗಿಯ ಚಿಕಿತ್ಸೆಯಲ್ಲಿ ವೈದ್ಯರೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸುವುದರ ಜೊತೆಗೆ ರೋಗಿಯ ಆರೈಕೆ, ಮಾನಸಿಕ ಧೈರ್ಯ ತುಂಬುವುದು ಹಾಗೂ ಆರೋಗ್ಯದ ಕುರಿತು ಅಗತ್ಯ ಮಾರ್ಗದರ್ಶನ ನೀಡುವಲ್ಲಿ ನರ್ಸ್‌ಗಳ ಸೇವೆ ಮಹತ್ವದಾಗಿದೆ ಎಂದು ಹೇಳಿದರು.

ನರ್ಸಿಂಗ್ ವಿದ್ಯಾರ್ಥಿಗಳು ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ, ಪ್ರಾಯೋಗಿಕ ಜ್ಞಾನ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು. ಪ್ರತಿಯೊಬ್ಬ ರೋಗಿಯನ್ನೂ ಗೌರವದಿಂದ ಕಾಣುವುದು, ಅವರ ನೋವು–ನಲಿವುಗಳನ್ನು ಅರ್ಥಮಾಡಿಕೊಳ್ಳುವುದು ಹಾಗೂ ಆತ್ಮೀಯತೆಯಿಂದ ಸೇವೆ ಸಲ್ಲಿಸುವುದು ಉತ್ತಮ ನರ್ಸ್‌ನ ಪ್ರಮುಖ ಗುಣಗಳಾಗಿವೆ ಎಂದು ತಿಳಿಸಿದರು. ವೈದ್ಯಕೀಯ ಕ್ಷೇತ್ರದಲ್ಲಿ ನಿರಂತರವಾಗಿ ಹೊಸ ತಂತ್ರಜ್ಞಾನಗಳು ಮತ್ತು ಚಿಕಿತ್ಸಾ ವಿಧಾನಗಳು ಅಭಿವೃದ್ಧಿಯಾಗುತ್ತಿದ್ದು, ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಕಾಲಕ್ಕೆ ತಕ್ಕಂತೆ ನವೀಕರಿಸಿಕೊಳ್ಳಬೇಕು. ಕಲಿಕೆಯ ಪ್ರಕ್ರಿಯೆ ಶಿಕ್ಷಣ ಪೂರ್ಣಗೊಂಡ ನಂತರವೂ ನಿರಂತರವಾಗಿರಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸಿದ ಉಪನ್ಯಾಸ ವಿಶೇಷ ಉಪನ್ಯಾಸದ ಸಂದರ್ಭದಲ್ಲಿ ಡಾ. ರವಿ ದಾನಿ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ವೈದ್ಯಕೀಯ ಕ್ಷೇತ್ರದಲ್ಲಿ ಎದುರಾಗಬಹುದಾದ ವಿವಿಧ ಸವಾಲುಗಳು ಹಾಗೂ ಅವುಗಳನ್ನು ಆತ್ಮವಿಶ್ವಾಸದಿಂದ ಎದುರಿಸುವ ಕುರಿತು ಮಾರ್ಗದರ್ಶನ ನೀಡಿದರು. ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟುಕೊಂಡು ಗುರಿಯನ್ನು ನಿಗದಿಪಡಿಸಿಕೊಂಡು ಮುನ್ನಡೆಯಬೇಕು. ಪ್ರತಿಯೊಂದು ಸಣ್ಣ ಅನುಭವವೂ ಭವಿಷ್ಯದ ವೃತ್ತಿಜೀವನಕ್ಕೆ ಸಹಕಾ–ರಿಯಾಗುತ್ತದೆ. ತಪ್ಪುಗಳಿಂದ ಕಲಿಯುವ ಮನೋಭಾವ ಬೆಳೆಸಿಕೊಂಡು ನಿರಂತರವಾಗಿ ತಮ್ಮನ್ನು ತಾವು ಅಭಿವೃದ್ಧಿಪಡಿಸಿಕೊಳ್ಳಬೇಕು ಎಂದು ಅವರು ಹೇಳಿದರು. ಅವರ ಪ್ರೇರಣಾದಾಯಕ ಮಾತುಗಳು ವಿದ್ಯಾರ್ಥಿಗಳಲ್ಲಿ ಹೊಸ ಉತ್ಸಾಹ ಮತ್ತು ಆತ್ಮವಿಶ್ವಾಸವನ್ನು ಮೂಡಿಸಿದವು. ವಿದ್ಯಾರ್ಥಿಗಳು ಉಪನ್ಯಾಸವನ್ನು ಆಸಕ್ತಿಯಿಂದ ಆಲಿಸಿ, ವೈದ್ಯಕೀಯ ಕ್ಷೇತ್ರಕ್ಕೆ ಸಂಬಂಧಿಸಿದ ಹಲವು ವಿಷಯಗಳ ಕುರಿತು ಮಾಹಿತಿ ಪಡೆದುಕೊಂಡರು.

ಪ್ರತೀ ಶನಿವಾರ ಜ್ಞಾನವರ್ಧಕ ಕಾರ್ಯಕ್ರಮ ಸನ್ ರೈಸ್ ವಿದ್ಯಾ ಸಂಸ್ಥೆಯ ವತಿಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಜ್ಞಾನವನ್ನು ವೃದ್ಧಿಸುವುದರ ಜೊತೆಗೆ ವೈದ್ಯಕೀಯ ಕ್ಷೇತ್ರದ ಅನುಭವಿಗಳು ಹಾಗೂ ತಜ್ಞರಿಂದ ಪ್ರಾಯೋಗಿಕ ಜ್ಞಾನ ಮತ್ತು ವೃತ್ತಿಪರ ಮಾರ್ಗದರ್ಶನ ದೊರಕಿಸುವ ಉದ್ದೇಶದಿಂದ ಪ್ರತೀ ಶನಿವಾರ ವಿಶೇಷ ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ತರಗತಿಯಲ್ಲಿ ಕಲಿಯುವ ಪಠ್ಯಕ್ರಮದ ಜೊತೆಗೆ ವೈದ್ಯಕೀಯ ಕ್ಷೇತ್ರದ ನೈಜ ಅನುಭವ ಹಾಗೂ ವೃತ್ತಿಪರ ವಿಚಾರಗಳನ್ನು ತಿಳಿದುಕೊಳ್ಳಲು ಸಹಕಾರಿಯಾಗುತ್ತಿವೆ. ವಿವಿಧ ಕ್ಷೇತ್ರಗಳ ತಜ್ಞರನ್ನು ಆಹ್ವಾನಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವ ಮೂಲಕ ಅವರ ಜ್ಞಾನ, ಆತ್ಮವಿಶ್ವಾಸ ಹಾಗೂ ವೃತ್ತಿಪರ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಸಂಸ್ಥೆ ನಿರಂತರವಾಗಿ ಪ್ರಯತ್ನಿಸುತ್ತಿದೆ.





ಉಪನ್ಯಾಸಕರಾದ ಶೋಭಾ ಅವರಿಂದ ಕೃತಜ್ಞತೆ ಕಾರ್ಯಕ್ರಮದ ಸಂದರ್ಭದಲ್ಲಿ ಉಪನ್ಯಾಸಕರಾದ ಶೋಭಾ ಅವರು ಮಾತನಾಡಿ, 3ನೇ ಪುಟಕ್ಕೆ

ಸಾಹಿತ್ಯ ಸಿಂಚನ

ನೆರಳಿನೊಂದಿಗೆ ಸಂಭಾಷಣೆ

ನನ್ನ ಹೆಜ್ಜೆಯ ಜೊತೆ ಹೆಜ್ಜೆ ಹಾಕುವೆ ನೀನು,
ಮೌನದ ಮಾತುಗಳನ್ನೇ ಕೇಳುವೆ ನೀನು.
"ಯಾಕೆ ನನ್ನನ್ನು ಹಿಂಬಾಲಿಸುವೆ?" ಎಂದೆ ನಾನು,
"ನೀ ಇರುವವರೆಗೂ ಜೊತೆಯಲ್ಲಿರುವೆ" ಎಂದೆ ನೀನು.

ನಾನು ನಗುವಾಗ ನಗುವೆ ನೀನು,
ನಾನು ಅಳುವಾಗ ಮೌನವಾಗಿರುವೆ ನೀನು.
ನನ್ನ ಕನಸುಗಳಿಗೆ ಸಾಕ್ಷಿಯಾಗುವೆ,
ನನ್ನ ನೋವಿಗೆ ಸಂಗಾತಿಯಾಗುವೆ.

ನಾನು ಓಡಿದರೆ ನೀನೂ ಓಡುವೆ,
ನಾನು ನಿಂತರೆ ನೀನೂ ನಿಲ್ಲುವೆ.
ಜಗವೆಲ್ಲ ನನ್ನನ್ನು ಮರೆತರೂ,
ನನ್ನ ನೆರಳಾಗಿ ನೀನು ಉಳಿಯುವೆ.

ಬೆಳಕಿನ ಜೊತೆ ಹುಟ್ಟಿದರೂ ನೀನು,
ಕತ್ತಲಲ್ಲಿ ಮಾತ್ರ ಮರೆಯಾಗುವೆ.
ನನ್ನ ಏಕಾಂತದ ಕ್ಷಣಗಳಲಿ,
ನನ್ನೊಡನೆ ಮೌನವಾಗಿ ಮಾತನಾಡುವೆ.

"ನೀ ಯಾರು" ಎಂದು ಕೇಳಿದಾಗ,
"ನಿನ್ನದೇ ಮತ್ತೊಂದು ರೂಪ" ಎಂದೆ ನೀನು.
ನನ್ನ ಬದುಕಿನ ಕೊನೆಯ ಹೆಜ್ಜೆಯವರೆಗೂ,
ನನ್ನ ನೆರಳಾಗಿ ಜೊತೆಯಿರುವೆ ನೀನು.

ರಾಜಮನೆತನಕ್ಕೆ ದಸರಾ ಮಹೋತ್ಸವದ ಅಧಿಕೃತ ಆಹ್ವಾನ

ನೈಜ್ಯ ದೆಸೆ ನ್ಯೂಸ್

ಮೈಸೂರು: ನಗರಾಭಿವೃದ್ಧಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಮೈಸೂರು ಅರಮನೆಯಲ್ಲಿ ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರನ್ನು ಭೇಟಿಯಾಗಿ ದಸರಾ ಮಹೋತ್ಸವಕ್ಕೆ ಅಧಿಕೃತವಾಗಿ ಆಹ್ವಾನ ನೀಡಿದರು.



ಈ ವೇಳೆ ಸಚಿವರು ಮಾತನಾಡಿ, ಪ್ರತೀ ವರ್ಷದಂತೆ ಈ ಬಾರಿಯೂ ರಾಜಮನೆತನಕ್ಕೆ ಗೌರವಪೂರ್ವಕವಾಗಿ ಆಹ್ವಾನ ಪತ್ರಿಕೆ ನೀಡಲಾಗಿದೆ. ರಾಜಮನೆತನದವರು ದಸರಾ ಆಚರಣೆಗೆ ಸಂಪೂರ್ಣ ಸಹಕಾರ ನೀಡುವ ಭರವಸೆ ನೀಡಿದ್ದಾರೆ. ಕಳೆದ ಬಾರಿ ಅಂಬಾರಿ ಕಟ್ಟುವ ವೇಳೆ ಜನಸಂದಣಿಯಿಂದ ವಿಳಂಬವಾಗಿತ್ತು. ಈ ಬಾರಿ ಕಡಿಮೆ ಜನರಿಗೆ ಅವಕಾಶ ನೀಡುವಂತೆ ರಾಜಮನೆತನದವರು ಸಲಹೆ ನೀಡಿದ್ದಾರೆ.ಈ ಸಂದರ್ಭದಲ್ಲಿ ಶಾಸಕ ಶ್ರೀವತ್ಸ, ಗ್ಯಾರಂಟಿ ಯೋಜನೆ ಸಮಿತಿ ಉಪಾಧ್ಯಕ್ಷರಾದ ಡಾ.ಪುಷ್ಪ ಅಮರನಾಥ್, ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ, ಜಿ.ಪಂ. ಸಿಇಒ ಯುಕೇಶ್ ಕುಮಾರ್, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಟ್ಕರ್, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಆಯುಬ್‌ಖಾನ್ ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಕಮಲದಿನ್ನಿ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿ ಶಿವಯ್ಯ ಗುಂಡು ಎಸೆತದಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

ನೈಜ್ಯ ದೆಸೆ ನ್ಯೂಸ್

ಕಮಲದಿನ್ನಿ: ರಾಯಚೂರು ಜಿಲ್ಲೆ ಅರಕೇರಾ ತಾಲೂಕಿನ ಕಮಲದಿನ್ನಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಶಿವಯ್ಯ ತಂದೆ ಮಲ್ಲಿಕಾರ್ಜುನ ಅವರು ಗುಂಡು ಎಸೆತ ಸ್ಪರ್ಧೆಯಲ್ಲಿ ಜಿಲ್ಲಾ ಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಯ ಸಾಧನೆಯನ್ನು ಅಭಿನಂದಿಸುವ ಸಲುವಾಗಿ ಶಾಲೆಯ ಎಸ್‌ಡಿ–ಎಂಸಿ ಅಧ್ಯಕ್ಷರು, ಸದಸ್ಯರು, ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರು ಇಂದು ಶಿವಯ್ಯ ಅವರ ಮನೆಗೆ ಭೇಟಿ ನೀಡಿ ಸನ್ಮಾನಿಸಿ, ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು.



ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಲು ಹೆಚ್ಚಿನ ತರಬೇತಿಯ ಅಗತ್ಯವಿರುವ ಹಿನ್ನೆಲೆಯಲ್ಲಿ, ಶಿವಯ್ಯ ಅವರಿಗೆ ಒಂದು ತಿಂಗಳ ಕಾಲ ಕ್ರೀಡಾ ಶಾಲೆಯಲ್ಲಿ ವಿಶೇಷ ತರಬೇತಿ ಕೊಡಿಸುವಂತೆ ಅವರ ತಂದೆ–ತಾಯಿಗೆ ಮಾರ್ಗದರ್ಶನ ನೀಡಲಾಯಿತು.

ಶಿವಯ್ಯ ಅವರಿಗೆ ಪ್ರಾಥಮಿಕ ಹಂತದಲ್ಲಿ ಕ್ರೀಡಾ ತರಬೇತಿ ನೀಡಿ, ಜಿಲ್ಲಾ ಮಟ್ಟದ ಸ್ಪರ್ಧೆಗೆ ಸಿದ್ಧಪಡಿಸಿ ಸಾಧನೆ ಮಾಡಲು ಸಹಕರಿಸಿದ ಶಿಕ್ಷಕ ದಿನೇಶ್ ಅವರನ್ನೂ ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ವಿದ್ಯಾರ್ಥಿ ಶಿವಯ್ಯ ಅವರ ಸಾಧನೆಗೆ ಎಸ್‌ಡಿಎಂಸಿ ಅಧ್ಯಕ್ಷ ಪ್ರಕಾಶ್, ಸರ್ವ ಸದಸ್ಯರು, ಮುಖ್ಯ ಶಿಕ್ಷಕಿ ರೇಖಾ ಆರ್., ಶಿಕ್ಷಕರಾದ ಅಲ್ಲಿಸಾಬ್, ದಿನೇಶ್, ಸುರೇಶ್ ಡಿ. ಹಾಗೂ ಸಹ ಶಿಕ್ಷಕರು ಅಭಿನಂದನೆ ಸಲ್ಲಿಸಿ, ರಾಜ್ಯಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು.

ಮಳೆ ಕೊರತೆಯಿಂದ ತೊಗರಿ ಬೆಳೆ ಹಾನಿ ರೈತ ಚಿಂತೆ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಮಳೆ ಕೊರತೆಯಿಂದಾಗಿ ತೊಗರಿ ಬೆಳೆ ಸರಿಯಾಗಿ ಬೆಳವಣಿಗೆಯಾಗದೆ ರೈತರು ಆತಂಕಕ್ಕೆ ಒಳಗಾಗಿದ್ದಾರೆ. ತಾಲೂಕಿನ ಕಡೇಕೊಪ್ಪ ಗ್ರಾಮದ ರೈತ ಬಸವರಾಜ ಜಿಗೇರಿ ಅವರು ಐದು ಎಕರೆ ಜಮೀನಿನಲ್ಲಿ ತೊಗರಿ ಬೆಳೆ ಬೆಳೆದಿದ್ದು, ಸಮರ್ಪಕ ಮಳೆಯಾಗದ ಕಾರಣ ಬೆಳೆ ನಿರೀಕ್ಷಿತ ಪ್ರಮಾಣದಲ್ಲಿ ಬೆಳೆಯುತ್ತಿಲ್ಲ.

ಇತ್ತೀಚೆಗೆ ಸ್ವಲ್ಪ ಮಳೆಯಾಗಿದ್ದು, ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾದರೆ ಅಲ್ಪ ಪ್ರಮಾಣದಲ್ಲಾದರೂ ಇಳುವರಿ ದೊರೆಯುವ ನಿರೀಕ್ಷೆಯಲ್ಲಿ ರೈತರು ಬೆಳೆ ರಕ್ಷಣೆಗಾಗಿ ಔಷಧಿ ಸಿಂಪಡಣೆ ಮಾಡುತ್ತಿದ್ದಾರೆ.

ಬೀಜ, ಗೊಬ್ಬರ, ಜಮೀನು ಬಾಡಿಗೆ, ಔಷಧಿ ಸೇರಿದಂತೆ ವಿವಿಧ ಖರ್ಚುಗಳನ್ನು ಮಾಡಿ ಬೆಳೆ ಬೆಳೆದಿರುವ ರೈತರಿಗೆ ಮಳೆ ಕೈಕೊಟ್ಟಿರುವುದು ಸಂಕಷ್ಟ ತಂದಿದೆ. ಸರ್ಕಾರ ಬರಪೀಡಿತ ತಾಲೂಕು ಎಂದು ಘೋಷಣೆ ಮಾಡಿದ್ದರೂ, ಬರ ಪರಿಹಾರ ರೈತರ ಕೈಗೆ ತಲುಪುವಲ್ಲಿ ವಿಳಂಬವಾಗುತ್ತಿದೆ ಎಂದು ರೈತ ಬಸವರಾಜ ಜಿಗೇರಿ ಅಳಲು ತೋಡಿಕೊಂಡರು.

"ಸರ್ಕಾರ ಬರ ಘೋಷಣೆ ಮಾಡಿರುವುದು ಕಾಗದಕ್ಕೆ ಸೀಮಿತವಾಗದೆ, ಸಂಕಷ್ಟದಲ್ಲಿರುವ ರೈತರಿಗೆ ತಕ್ಷಣ ಪರಿಹಾರ ನೀಡಬೇಕು. ಮಳೆ ಕೊರತೆಯಿಂದ ಬೆಳೆ ಹಾನಿಗೊಳಗಾದ ರೈತರ ನೆರವಿಗೆ ಸರ್ಕಾರ ಮುಂದಾಗಬೇಕು" ಎಂದು ಅವರು ಒತ್ತಾಯಿಸಿದರು.



ಜನಪದ ಹುಟ್ಟಿದ್ದು ಜನರಿಂದ, ಜನರಿಗಾಗಿ ಜನಪದ ಉಳಿಯಬೇಕು ಪವಾಡೆಪ್ಪ ಚೌಡ್ಕಿ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ:ಜನಪದ ಹುಟ್ಟಿದ್ದು ಜನರಿಂದ ಜನ–ರಿಗಾಗಿ, ಜನಪದ ಎಂದಿಗೂ ಅಳಿಯಬಾರದು, ಜನಪದ ಉಳಿಯಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಪವಾಡೆಪ್ಪ ಚೌಡ್ಕಿ ಹೇಳಿದರು.

ತಾಲೂಕಿನ ಕೆ.ಗೋನಾಳ ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೊಪ್ಪಳ ಹಾಗೂ ಶ್ರೀ ಸಗರ ಚಕ್ರವರ್ತಿ ಹಿಂದುಳಿದ ವರ್ಗದ ಶಿಕ್ಷಣ ಹಾಗೂ ಗ್ರಾಮೀಣಾಭಿವೃದ್ಧಿ ಟ್ರಸ್ಟ್ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ "ಜನಪದ ಸೌರಭ – ಚೌಡ್ಕಿ ಪದ ಹಾಗೂ ಸೋಬಾನ ಪದ" ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಜಾನಪದ ಕಲೆಗಳು ನಮ್ಮ ಸಂಸ್ಕೃತಿಯ ಜೀವಾಳ ಎಂದರು.

ನಮ್ಮ ಹಳ್ಳಿಗಳಲ್ಲಿ ಹುಟ್ಟಿದ ಚೌಡ್ಕಿ ಪದ, ಸೋಬಾನ ಪದ, ಗೀಗೀ ಪದ, ಡೊಳ್ಳಿನ ಪದ, ಮೊಹರಂ ಪದ ಸೇರಿದಂತೆ ಹಲವಾರು ಪದಗಳು ನಮ್ಮ ಹಳ್ಳಿಗಳ ಜನರ ಜನಪದವಾಗಿವೆ. ಈ ಎಲ್ಲಾ ಪದಗಳು ಇಂದು ನಶಿಸುತ್ತಿವೆ. ಬರಿ ಡಿಜೆ ಸಂಸ್ಕೃತಿಯ ಭರಾಟೆಯಲ್ಲಿ ನಮ್ಮ ಮೂಲ ಸೊಗಡು ಮರೆಯಾಗುತ್ತಿದೆ. ಯುವ ಪೀಳಿಗೆಗೆ ಜಾನಪದದ ಮಹತ್ವ ತಿಳಿಸುವ ಕೆಲಸ ಆಗಬೇಕು. ಜನಪದ ಉಳಿದರೆ ಮಾತ್ರ ಕನ್ನಡ ಸಂಸ್ಕೃತಿ ಉಳಿಯುತ್ತದೆ ಎಂದು ಕರೆ ನೀಡಿದರು.



ಇದೇ ಸಂದರ್ಭದಲ್ಲಿ ಕಲಾವಿದರಾದ ಶ್ರೀಕಾಂತ್ ಚೌಡ್ಕಿ ಚೌಡ್ಕಿ ಪದ ಹಾಡಿದರು. ಶ್ರೀಮತಿ ಗಂಗಮ್ಮ ಕಂದಗಲ್ ಸೋಬಾನ ಪದ ಹಾಡುವ ಮೂಲಕ ಜನಮನ ರಂಜಿಸಿ, ನೆರೆದಿದ್ದ ನೂರಾರು ಜನರನ್ನು ಮಂತ್ರಮುಗ್ಧಗೊಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಸಗರ ಚಕ್ರವರ್ತಿ ಹಿಂದುಳಿದ ವರ್ಗ ಹಾಗೂ ಶಿಕ್ಷಣ, ಗ್ರಾಮೀಣಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಮೈಲಾರಪ್ಪ ಮಂತ್ರಿ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಪತ್ರಕರ್ತರಾದ ಮಾರುತಿ ಕುಷ್ಟಗಿ, ಗೌಡಪ್ಪಗೌಡ ಕಂದಗಲ್, ಬಸವರಾಜ ಕಂದಕೂರ, ಫಕೀರಸಬ್ ನದಾಫ್, ದೊಡ್ಡಪ್ಪ ಬಳೂಟಗಿ, ಹನಮಂತ ದಾಸರ, ದೊಡ್ಡಬಸಪ್ಪ ಸಜ್ಜನ ಸೇರಿದಂತೆ ಗ್ರಾಮ ಪಂಚಾಯಿತಿ ಸದಸ್ಯರು, ಟ್ರಸ್ಟ್ ನ ಪದಾಧಿಕಾರಿಗಳು, ಗ್ರಾಮದ ಹಿರಿಯರು, ಮಹಿಳೆಯರು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ರೈಫಲ್ ಶೂಟಿಂಗ್‌ನಲ್ಲಿ ಮೆಟ್ರಿ ಗ್ರಾಮದ ಚಿನ್ನರಾಜ ಕಮಾಲ್: ರಾಜ್ಯ ಮಟ್ಟದ ಸ್ಪರ್ಧೆಗೆ ಅರ್ಹತೆ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಕಲಬುರಗಿಯಲ್ಲಿ ಇತ್ತೀಚೆಗೆ ಆಯೋಜಿಸಲಾಗಿದ್ದ ಪ್ರಸಕ್ತ ಸಾಲಿನ ಪ್ರತಿಷ್ಠಿತ ಕಲಬುರಗಿ ವಿಭಾಗ ಮಟ್ಟದ ದಸರಾ ಸಿಎಂ ಕಪ್–2026 ಕ್ರೀಡಾಕೂಟದಲ್ಲಿ ಬಳ್ಳಾರಿ ಜಿಲ್ಲೆಯ ಕಂಪ್ಲಿ ತಾಲೂಕಿನ ಮೆಟ್ರಿ ಗ್ರಾಮದ ಪ್ರತಿಭಾನ್ವಿತ ಕ್ರೀಡಾಪಟು ಸಿ.ಡಿ. ಚಿನ್ನರಾಜ ಅವರು ಅಮೋಘ ಸಾಧನೆ ಮಾಡಿದ್ದಾರೆ.

ಹಿರಿಯರ ವಿಭಾಗದ 10 ಮೀಟ–ರ್ ಏರ್ ರೈಫಲ್ ಶೂಟಿಂಗ್ ಸ್ಪರ್ಧೆಯಲ್ಲಿ ಅತ್ಯುತ್ತಮ ಗುರಿ ಪ್ರದರ್ಶಿಸಿದ ಅವರು ಪ್ರಥಮ ಸ್ಥಾನ (ಚಿನ್ನದ ಪದಕ) ಗಳಿಸುವುದರೊಂದಿಗೆ ರಾಜ್ಯ ಮಟ್ಟದ ಸ್ಪರ್ಧೆಗೆ ಅರ್ಹತೆ ಪಡೆದಿದ್ದಾರೆ. ವಿಭಾಗ ಮಟ್ಟದ ತೀವ್ರ ಪೈಪೋಟಿಯಿಂದ ಕೂಡಿದ್ದ ಈ ಸ್ಪರ್ಧೆಯಲ್ಲಿ ಆರಂಭದಿಂದಲೂ ಸ್ಥಿರತೆ ಕಾಯ್ದುಕೊಂಡ ಚಿನ್ನರಾಜ, ಅಂತಿಮ ಸುತ್ತಿನಲ್ಲಿ ಅತ್ಯಂತ ನಿಖರವಾದ ಗುರಿ ಇಟ್ಟು ಅಗ್ರಸ್ಥಾನವನ್ನು ತಮ್ಮದಾಗಿಸಿಕೊಂಡರು.

ಗ್ರಾಮೀಣ ಭಾಗದಲ್ಲಿ ಸೂಕ್ತ ಸೌಲಭ್ಯಗಳ ಕೊರತೆಯಿದ್ದರೂ, ತಮ್ಮ ಕಠಿಣ ಪರಿಶ್ರಮ ಹಾಗೂ ನಿರಂತರ ಅಭ್ಯಾಸದಿಂದ ಈ ಮೈಲಿಗಲ್ಲು ತಲುಪಿರುವ ಅವರು ಮೆಟ್ರಿ ಗ್ರಾಮ, ಕಂಪ್ಲಿ ತಾಲೂಕು ಹಾಗೂ ಬಳ್ಳಾರಿ ಜಿಲ್ಲೆಯ ಕೀರ್ತಿಯನ್ನು ರಾಜ್ಯ ಮಟ್ಟದಲ್ಲಿ ಬೆಳಗುವಂತೆ ಮಾಡಿದ್ದಾರೆ.

ಚಿನ್ನರಾಜ ಅವರ ಈ ಪ್ರಶಂಸನೀಯ ಸಾಧನೆಯ ಸುದ್ದಿ ತಿಳಿಯುತ್ತಿದ್ದಂತೆ ಮೆಟ್ರಿ ಗ್ರಾಮದಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಗಿದೆ. ಕ್ರೀಡಾಪಟುವಿನ ಸಾಹಸಕ್ಕೆ ಗ್ರಾಮದ ಹಿರಿಯರು, ಪ್ರಮುಖ ಮುಖಂಡರು, ಯುವಕರು ಹಾಗೂ ಕ್ರೀಡಾಭಿಮಾನಿಗಳು ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಮುಂಬರುವ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದಲ್ಲೂ ಚಿನ್ನರಾಜ ಅವರು ಇದೇ ರೀತಿಯ ಅತ್ಯುತ್ತಮ ಪ್ರದರ್ಶನ ನೀಡಿ ಜಿಲ್ಲೆಗೆ ಹಾಗೂ ರಾಜ್ಯಕ್ಕೆ ಹೆಮ್ಮೆ ತರಲಿ ಎಂದು ಸಾರ್ವಜನಿಕರು ಮತ್ತು ಸ್ನೇಹಿತರ ಬಳಗ ಸಿಹಿ ಹಂಚಿ ಶುಭ ಹಾರೈಸಿದ್ದಾರೆ.



ಮಸ್ಕಿಯಲ್ಲಿ 'ಗಾಂಧಿ 157ಗಾಂಧಿ ವಿಚಾರ ಚಿಂತನ' ಕಾರ್ಯಕ್ರಮ । ಗಾಂಧೀಜಿ ಆದರ್ಶಗಳ ಕುರಿತು ಚಿಂತನೆ, ಕವಿತೆ ವಾಚನ

ಮಾನವೀಯ ಮೌಲ್ಯಗಳೇ ಉತ್ತಮ ಸಮಾಜ ನಿರ್ಮಾಣಕ್ಕೆ ಬುನಾದಿ.– ಶಿಕ್ಷಕ ಅದಪ್ಪ ಹೆಂಬಾ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ಸತ್ಯ, ಅಹಿಂಸೆ, ಸರಳತೆ ಹಾಗೂ ಮಾನವೀಯ ಮೌಲ್ಯಗಳೇ ಉತ್ತಮ ಸಮಾಜ ನಿರ್ಮಾಣ–ಕ್ಕೆ ಬುನಾದಿ. ಮಹಾತ್ಮ ಗಾಂಧೀಜಿಯವರು ಪ್ರತಿಪಾದಿಸಿದ ಈ ತತ್ವಗಳು ಇಂದಿನ ಸಮಾಜಕ್ಕೂ ದಾರಿದೀಪವಾಗಿದ್ದು, ಅವುಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮುಖ್ಯ ಶಿಕ್ಷಕ ಅದಪ್ಪ ಹೆಂಬಾ ಅಭಿಪ್ರಾಯಪಟ್ಟರು.

ಮಸ್ಕಿ ಪಟ್ಟಣದ ಅಕ್ಷರ ಸಾಹಿತ್ಯ ವೇದಿಕೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ಮಸ್ಕಿ ಘಟಕದ ಸಹಯೋಗದಲ್ಲಿ ಸರಸ್ವತಿ ವಿದ್ಯಾನಿಕೇತನ ಶಾಲೆಯಲ್ಲಿ ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ ಅಂಗವಾಗಿ ಆಯೋಜಿಸಿದ್ದ 'ಗಾಂಧಿ 157?ಗಾಂಧಿ ವಿಚಾರ ಚಿಂತನ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು , ಸತ್ಯ ಮತ್ತು ಅಹಿಂಸೆಯ ಮಾರ್ಗದ ಮೂಲಕವೂ ಜಗತ್ತಿನಲ್ಲಿ ಮಹತ್ತರ ಬದಲಾವಣೆ ತರಬಹುದು ಎಂಬುದನ್ನು ಗಾಂಧೀಜಿ ತಮ್ಮ ಜೀವನ ಹಾಗೂ ಹೋರಾಟದ ಮೂಲಕ ಸಾಬೀತುಪಡಿಸಿದ್ದಾರೆ. ಅವರ ಹೋರಾಟದ ಹಾದಿ ಮತ್ತು ಜೀವನಾದರ್ಶಗಳು ಇಂದಿನ ಯುವಜನತೆಗೆ ಸ್ಫೂರ್ತಿಯಾಗಬೇಕು ಎಂದರು.



ನಂತರ ಪ್ರಭಾರಿ ಪ್ರಾಚಾರ್ಯರಾದ ನಾಗೇಶ್ ಮಾತನಾಡಿ, ಗಾಂಧೀಜಿಯವರ ಸರಳ ಜೀವನ, ಸ್ವಚ್ಛತೆ, ಸ್ವದೇಶಿ ಚಿಂತನೆ ಹಾಗೂ ಶ್ರಮದ ಗೌರವದಂತಹ ವಿಚಾರಗಳು ಇಂದಿನ ವಿದ್ಯಾರ್ಥಿಗಳ ಬದುಕಿಗೂ ಪ್ರಸ್ತುತವಾಗಿವೆ. ವಿದ್ಯಾರ್ಥಿಗಳು ಬಾಲ್ಯದಿಂದಲೇ ಇಂತಹ ಮೌಲ್ಯಗಳನ್ನು ರೂಢಿಸಿಕೊಂಡು ಜವಾಬ್ದಾ–ರಿಯುತ ನಾಗರಿಕರಾಗಬೇಕು ಎಂದು ಹೇಳಿದರು.

ನಂತರ ಶಿಕ್ಷಕ ಸಿದ್ದಾರಡ್ಡಿ ಗಿಣಿವಾರ ಮಾತನಾಡಿ, ಗಾಂಧೀಜಿಯವರ ಹೋರಾಟ ಕೇವಲ ದೇಶದ ಸ್ವಾತಂತ್ರ್ಯಕ್ಕೆ ಸೀಮಿತವಾಗಿರಲಿಲ್ಲ. ಮಾನವೀಯತೆ, ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಸ್ಥಾಪನೆಯೂ ಅವರ ಆಶಯವಾಗಿತ್ತು. ಗಾಂಧೀಜಿಯವರ ಚಿಂತನೆಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಹೊಣೆಗಾರಿಕೆ ಎಲ್ಲರ ಮೇಲಿದೆ ಎಂದರು.ಸಿದ್ರಾಮಯ್ಯ ಗದ್ದಿಮಠ ಮಾತನಾಡಿ, ಸಮಾಜದಲ್ಲಿ ಹೆಚ್ಚುತ್ತಿರುವ ಹಿಂಸೆ, ಅಸಹನೆ ಮತ್ತು ದ್ವೇಷದ ವಾತಾವರಣ–ಕ್ಕೆ ಗಾಂಧೀಜಿಯವರ ಸತ್ಯ ಹಾಗೂ ಅಹಿಂಸೆಯ ತತ್ವಗಳು ಪರಿಹಾರದ ಮಾರ್ಗ ತೋರಿಸಬಲ್ಲವು.

ಗಾಂಧೀಜಿಯವರನ್ನುಜಯಂತಿಯಂದು ಸ್ಮರಿಸುವುದಷ್ಟೇ ಮುಖ್ಯವಲ್ಲ, ಅವರ ಆದರ್ಶಗಳನ್ನು ನಿತ್ಯ ಜೀವನದಲ್ಲಿ ಪಾಲಿಸುವುದು ಅಗತ್ಯ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಗುಂಡೂರಾವ್ ದೇಸಾಯಿ ಮಾತನಾಡಿ, ಗಾಂಧೀಜಿಯವರ ವಿಚಾರಗಳು ಸಾರ್ವಕಾಲಿಕವಾಗಿದ್ದು, ಸತ್ಯ, ಅಹಿಂಸೆ, ಸರಳತೆ ಹಾಗೂ ಮಾನವೀಯ ಮೌಲ್ಯಗಳನ್ನು ಮಕ್ಕಳಲ್ಲಿ ಬೆಳೆಸುವ ಮೂಲಕ ಉತ್ತಮ ಸಮಾಜ ನಿರ್ಮಿಸಲು ಸಾಧ್ಯವಿದೆ ಎಂದರು.

ಕಾರ್ಯಕ್ರಮದಲ್ಲಿ ವರೇಂದ್ರ ಕೆ., ರಾಮಸ್ವಾಮಿ, ದೇವರಾಜ ಘಂಟಿ ಹಾಗೂ ವಿದ್ಯಾವತಿ ವನಕಿ ಅವರು ಗಾಂಧೀಜಿಯವರ ವ್ಯಕ್ತಿತ್ವ, ಆದ–ರ್ಶ ಮತ್ತು ದೇಶಪ್ರೇಮವನ್ನು ಬಿಂಬಿಸುವ ಕವಿತೆಗಳನ್ನು ವಾಚಿಸಿದರು. ಮಹೇಶ್ ಶೆಟ್ಟರ್ ಅವರು ಗಾಂಧೀಜಿಯವರ ಆತ್ಮಕಥೆ ಓದಿದರು. ವಿದ್ಯಾವತಿ ವನಕಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸರಸ್ವತಿ ವಿದ್ಯಾನಿಕೇತನ ಶಾಲೆಯ ವಿದ್ಯಾರ್ಥಿಗಳು, ಶಿಕ್ಷಕರು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ನೇಮಕಾತಿ ಪ್ರಕಟಣೆ

ಏಇಂ ನೇಮಕಾತಿ 2026 – 210 ಗ್ರೂಪ್–ಸಿ (ನೀರು ಸರಬರಾಜು ನಿರ್ವಾಹಕ, ಎಲೆಕ್ಟ್ರಿಷಿಯನ್) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಅಕ್ಟೋಬರ್ 1, 2026

KEA ನೇಮಕಾತಿ 2026: 210 ಗ್ರೂಪ್–ಸಿ (ನೀರು ಸರಬರಾಜು ನಿರ್ವಾಹಕ, ಎಲೆಕ್ಟ್ರಿಷಿಯನ್) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (KEA) ಸೆಪ್ಟೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಗ್ರೂಪ್–ಸಿ (ನೀರು ಸರಬರಾಜು ನಿರ್ವಾಹಕ, ಎಲೆಕ್ಟ್ರಿಷಿಯನ್) ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 30–ಸೆಪ್ಟೆಂಬರ್–2026 ರೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. (ಅರ್ಜಿ ಸಲ್ಲಿಕೆಯ ಗಡುವನ್ನು 07–ಅಕ್ಟೋಬರ್–2026 ರವರೆಗೆ ವಿಸ್ತರಿಸಲಾಗಿದೆ). ಅಧಿಕೃತ ವೆಬ್‌ಸೈಟ್: cetonline.karnataka.gov.in

1ನೇ ಪುಟದಿಂದ....


ಸನ್ ರೈಸ್ ವಿದ್ಯಾ ಸಂಸ್ಥೆಗೆ ಆಗಮಿಸಿ ವಿದ್ಯಾರ್ಥಿಗಳಿಗೆ "ವೈದ್ಯಕೀಯ ಕ್ಷೇತ್ರದಲ್ಲಿ ಯಶಸ್ಸಿನತ್ತ ಕೊಂಡೊಯ್ಯುವ ಕೌಶಲ್ಯಗಳ ಅಭಿವೃದ್ಧಿ" ಎಂಬ ಮಹತ್ವದ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದ ಡಾ. ರವಿ ದಾನಿ ಅವರಿಗೆ ಸಂಸ್ಥೆಯ ಪರವಾಗಿ ಕೃತಜ್ಞತೆ ಸಲ್ಲಿಸಿದರು. ವೈದ್ಯಕೀಯ ಕ್ಷೇತ್ರದಲ್ಲಿ ವಿದ್ಯಾರ್ಥಿಗಳು ಯಶಸ್ಸು ಸಾಧಿಸಲು ಅಗತ್ಯವಾದ ಕೌಶಲ್ಯಗಳು, ನರ್ಸಿಂಗ್ ವೃತ್ತಿಯ ಮಹತ್ವ ಹಾಗೂ ವೃತ್ತಿಜೀವನದಲ್ಲಿ ಆತ್ಮವಿಶ್ವಾಸದಿಂದ ಮುನ್ನಡೆಯುವ ಕುರಿತು ಅತ್ಯಂತ ಉಪಯುಕ್ತವಾದ ಮಾಹಿತಿಯನ್ನು ಡಾ. ರವಿ ದಾನಿ ಅವರು ನೀಡಿದ್ದಾರೆ. ಅವರ ಅನುಭವದ ಮಾತುಗಳು ನಮ್ಮ ವಿದ್ಯಾರ್ಥಿಗಳಿಗೆ ಬಹಳಷ್ಟು ಪ್ರೇರಣೆ ನೀಡಿವೆ ಎಂದು ಹೇಳಿದರು.

ಸನ್ ರೈಸ್ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ., ಕಾರ್ಯದರ್ಶಿಯಾದ ಇರ್ಷಾದ್ ಕೆ., ಎಲ್ಲಾ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಪರವಾಗಿ ಡಾ. ರವಿ ದಾನಿ ಅವರಿಗೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸಿದರು. ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸುವಲ್ಲಿ ಇಂತಹ ವಿಶೇಷ ಉಪನ್ಯಾಸಗಳು ಮಹತ್ವದ ಪಾತ್ರ ವಹಿಸುತ್ತವೆ. ಮುಂದಿನ ದಿನಗಳಲ್ಲಿಯೂ ವಿವಿಧ ವೈದ್ಯಕೀಯ ಕ್ಷೇತ್ರಗಳ ತಜ್ಞರನ್ನು ಆಹ್ವಾನಿಸಿ ವಿದ್ಯಾರ್ಥಿಗಳಿಗೆ ಜ್ಞಾನ ಮತ್ತು ವೃತ್ತಿಪರ ಮಾರ್ಗದರ್ಶನ ನೀಡುವ ಕಾರ್ಯಕ್ರಮಗಳನ್ನು ಮುಂದುವರಿಸಲಾಗುವುದು ಎಂದು ಸಂಸ್ಥೆಯ ವತಿಯಿಂದ ತಿಳಿಸಲಾಯಿತು. ಕಾರ್ಯಕ್ರಮದಲ್ಲಿ ಸನ್ ರೈಸ್ ಡಿ–ಫಾರ್ಮಸಿ, ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ದಸರಾ ಕ್ರೀಡಾಕೂಟಕ್ಕೆ ಆಯ್ಕೆಯಾದ ಗೋರೇಬಾಳ ಗ್ರಾಮದ ಪರಶುರಾಮ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: 2026ನೇ ಸಾಲಿನ ದಸರಾ ಕ್ರೀಡಾಕೂಟದಲ್ಲಿ ಜಿಲ್ಲಾ ಮಟ್ಟ ಹಾಗೂ ವಿಭಾಗ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು, ಮೈಸೂರಿನಲ್ಲಿ ನಡೆಯಲಿರುವ ರಾಜ್ಯಮಟ್ಟದ ದಸರಾ ಕ್ರೀಡಾಕೂಟಕ್ಕೆ ಸಿಂಧನೂರು ತಾಲೂಕಿನ ಗೋರೇಬಾಳ ಗ್ರಾಮದ ನಿವಾಸಿ ಪರಶುರಾಮ ತಂದೆ ಸಣ್ಣ ಹನುಮಂತ ಅವರು ಆಯ್ಕೆಯಾಗಿದ್ದಾರೆ.



ಬಡತನದ ನಡುವೆಯೂ ಕಠಿಣ ಪರಿಶ್ರಮದಿಂದ ಎಂ.ಎ ಪದವಿ ಪಡೆದಿರುವ ಪರಶುರಾಮ ಅವರು ಕ್ರೀಡಾ ಕ್ಷೇತ್ರದಲ್ಲಿಯೂ ಗಮನಾರ್ಹ ಸಾಧನೆ ಮಾಡುವ ಮೂಲಕ ಗ್ರಾಮೀಣ ಪ್ರತಿಭೆಗೆ ಮಾದರಿಯಾಗಿದ್ದಾರೆ. ಸೀಮಿತ ಸೌಲಭ್ಯಗಳ ನಡುವೆಯೂ ತಮ್ಮ ಪರಿಶ್ರಮ, ಆತ್ಮವಿಶ್ವಾಸ ಮತ್ತು ಕ್ರೀಡಾ ಪ್ರತಿಭೆಯಿಂದ ಜಿಲ್ಲಾ ಹಾಗೂ ವಿಭಾಗ ಮಟ್ಟದಲ್ಲಿ ಪ್ರಥಮ ಸ್ಥಾನವನ್ನು ಗಳಿಸಿರುವುದು ಗ್ರಾಮದ ಹೆಮ್ಮೆಯ ಸಂಗತಿಯಾಗಿದೆ. ಪರಶುರಾಮ ಅವರ ಸಾಧನೆಗೆ ಗ್ರಾಮಸ್ಥರು, ಶಿಕ್ಷಕರು, ಪಂಚಾಯತ್ ರಾಜ್ ಅಭಿವೃದ್ಧಿ ಅಧಿಕಾರಿಗಳು, ಸ್ನೇಹಿತರು ಹಾಗೂ ಗುರು–ಹಿರಿಯರು ಹರ್ಷ ವ್ಯಕ್ತಪಡಿಸಿ, ಮೈಸೂರಿನಲ್ಲಿ ನಡೆಯಲಿರುವ ದಸರಾ ಕ್ರೀಡಾಕೂಟದಲ್ಲಿಯೂ ಉತ್ತಮ ಸಾಧನೆಯನ್ನು ಮಾಡುವಂತೆ ಶುಭ ಹಾರೈಸಿದ್ದಾರೆ. ಗ್ರಾಮೀಣ ಪ್ರದೇಶದ ಯುವಕರು ಕ್ರೀಡೆ ಹಾಗೂ ಶಿಕ್ಷಣ ಎರಡರಲ್ಲೂ ಸಾಧನೆ ಮಾಡಬಹುದು ಎಂಬುದಕ್ಕೆ ಯುವಕ ಪರಶುರಾಮ ಅವರ ಸಾಧನೆ ಉತ್ತಮ ಉದಾಹರಣೆಯಾಗಿದೆ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಆದೇಶವಿದ್ದರೂ ಬಸ್ ನಿಲುಗಡೆ ಮಾಡದ ಸಿಬ್ಬಂದಿ: ಕಂಪ್ಲಿಯಲ್ಲಿ ಎಬಿವಿಪಿ ಪ್ರತಿಭಟನೆಯ ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಪಟ್ಟಣದ ಹೊಸಪೇಟೆ ರಾಜ್ಯ ಹೆದ್ದಾರಿಯಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಬಳಿ ಬಸ್‌ಗಳನ್ನು ಕಡ್ಡಾಯವಾಗಿ ನಿಲುಗಡೆಗೊಳಿಸಿ ವಿದ್ಯಾರ್ಥಿಗಳಿಗೆ ಸಾರಿಗೆ ಅನುಕೂಲ ಕಲ್ಪಿಸಬೇಕು ಎಂದು ಒತ್ತಾಯಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ABVP) ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಎಬಿವಿಪಿ ಜಿಲ್ಲಾ ಸಂಚಾಲಕ ಸಪ್ತಗಿರಿ ಮಂಚಿಕಂಟಿ, "ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಈ ಭಾಗದಲ್ಲಿ ಬಸ್ ನಿಲ್ಲಿಸುವಂತೆ ಸಾರಿಗೆ ಇಲಾಖೆಯ ಸ್ಪಷ್ಟ ಆದೇಶವಿದೆ. ಆದರೂ ಕೆಲವು ಬಸ್‌ಗಳ ಚಾಲಕರು ಮತ್ತು ನಿರ್ವಾಹಕರು ಇಲ್ಲಿ ವಾಹನಗಳನ್ನು ನಿಲುಗಡೆ ಮಾಡದೆ ನಿಯಮ ಉಲ್ಲಂಘಿಸುತ್ತಿದ್ದಾರೆ" ಎಂದು ದೂರಿದರು. "ಬಸ್ ನಿಲ್ಲಿಸುವಂತೆ ವಿನಂತಿಸುವ ವಿದ್ಯಾರ್ಥಿಗಳೊಂದಿಗೆ ಸಾರಿಗೆ ಸಿಬ್ಬಂದಿ ಅನುಚಿತವಾಗಿ ವರ್ತಿಸುತ್ತಿದ್ದಾರೆ. ಇತ್ತೀಚೆಗೆ ವಿದ್ಯಾರ್ಥಿಗಳು ಬಸ್ ನಿಲ್ಲಿಸಲು ಸೂಚಿಸಿದಾಗ, ಚಾಲಕ ನಿರ್ಲಕ್ಷ್ಯದಿಂದ ಅತಿ ವೇಗವಾಗಿ ಬಸ್ ಚಲಾಯಿಸಿದ್ದಾನೆ. ಇದರಿಂದಾಗಿ ಕಾಲೇಜಿನ ವಿದ್ಯಾರ್ಥಿ ಪಿ.ಎಚ್. ವಿಕಾಸ್ ಎಂಬಾತನ ಕೈಗೆ ಗಾಯವಾಗಿದೆ" ಎಂದು ಅವರು ಘಟನೆಯನ್ನು ತೀವ್ರವಾಗಿ ಖಂಡಿಸಿದರು.

ವಿದ್ಯಾರ್ಥಿಗಳ ಕಾಲೇಜು ಸಮಯಕ್ಕೆ ಪೂರಕವಾಗಿ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಕೂಡಲೇ ಕಾಲೇಜು ಬಳಿ ಬಸ್‌ಗಳ ಕಡ್ಡಾಯ ನಿಲುಗಡೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಒಂದು ವಾರದೊಳಗೆ ರಸ್ತೆ ತಡೆದು ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಅವರು ಎಚ್ಚರಿಸಿದರು. ಈ ಸಂದರ್ಭದಲ್ಲಿ ಸಂಘಟನೆಯ ತಾಲ್ಲೂಕು ಸಂಚಾಲಕ ಕಾರ್ತಿಕ ಹಾಗೂ ವಿದ್ಯಾರ್ಥಿಗಳಾದ ವಿಕಾಸ್, ನವೀನ್, ಶಶಾಂಕ್, ವೆಂಕಟ್, ಸಂತೋಷಕುಮಾರ್ ಉಪಸ್ಥಿತರಿದ್ದರು.

ತಾಲೂಕು ಮಟ್ಟದ ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರಧಾನ

ಸಿಂಧನೂರಿನಲ್ಲಿ ಶಿಕ್ಷಕರ ದಿನಾಚರಣೆ: ನಿವೃತ್ತ ಶಿಕ್ಷಕರಿಗೆ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಘಟಕ ಸಿಂಧನೂರು ವತಿಯಿಂದ ಶಿಕ್ಷಕರ ದಿನಾಚರಣೆಯ ಅಂಗವಾಗಿ ನಿವೃತ್ತ ಶಿಕ್ಷಕರಿಗೆ ಸನ್ಮಾನ ಹಾಗೂ ತಾಲೂಕು ಮಟ್ಟದ ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭ ನಗರದ ಕನಕದಾಸ ಕಲ್ಯಾಣ ಮಂಟಪದಲ್ಲಿ ನಡೆಯಿತು.

ಕಾರ್ಯಕ್ರಮಕ್ಕೆ ರೌಡಾಕುಂದದ ಶ್ರೀ ಯೋಗಿರಾಜ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಶಿಕ್ಷಕರ ಸೇವೆಯನ್ನು ಗೌರವಿಸುವ ಜೊತೆಗೆ, ಶಿಕ್ಷಣ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಶಿಕ್ಷಕರನ್ನು ಗುರುತಿಸಿ ತಾಲೂಕು ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಚಿದಾನಂದಯ್ಯ ಗುರುವಿನ್, ಬಿ.ಎನ್.ಪಾಟೀಲ್, ಚನ್ನನಗೌಡ ಆರ್.ಪಾಟೀಲ್, ಕುಮಾರಿ ಚೈತ್ರಾ ಎಂ. ಸೇರಿದಂತೆ ಸಂಘದ ಪದಾಧಿಕಾರಿಗಳು, ನಿವೃತ್ತ ಶಿಕ್ಷಕರು, ಹಾಲಿ ಶಿಕ್ಷಕರು ಹಾಗೂ ಹಲವು ಗಣ್ಯರು ಭಾಗವಹಿಸಿ ಮಾತನಾಡಿ, ಸಮಾಜದ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದ್ದು, ನಿವೃತ್ತ ಶಿಕ್ಷಕರ ಸೇವೆಯನ್ನು ಸ್ಮರಿಸಿ ಗೌರವಿಸುವುದು ಹಾಗೂ ಉತ್ತಮ ಶಿಕ್ಷಕರನ್ನು ಪ್ರೋತ್ಸಾಹಿಸುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಅಭಿಪ್ರಾಯ ಪಟ್ಟರು.

ಈ ಸಂದರ್ಭದಲ್ಲಿ: ಪ್ರಭಾಕರ್ ಕುಲಕರ್ಣಿ, ಬಸಲಿಂಗಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಚಾಗಪ್ಪ ಕೆ, ಅಕ್ಷರ ದಾಸೋಹ ಸಾಬಣ್ಣ ವಗ್ಗರ್, ಕ್ಷೇತ್ರ ಸಮನ್ವಯ ಅಧಿಕಾರಿ ಬಸವರಾಜ



ಆನೆಗುಂದಿ, ಸೋಮಲಿಂಗಪ್ಪ, ಮಲ್ಲಿಕಾರ್ಜುನ ಸಾಹುಕಾರ್ ಕಲ್ಲೂರು, ಜಿಲ್ಲಾ ಅಧ್ಯಕ್ಷ ಸುರೇಶ ಕುರ್ಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಳಕಪ್ಪ ಗಡಾದ, ಜಿಲ್ಲಾ ಉಪಾಧ್ಯಕ್ಷೆ ಮಾನಮ್ಮ ನಾಯಕ, ಗೌರವಾಧ್ಯಕ್ಷ ಸಿದ್ದಲಿಂಗಪ್ಪ ಮುರುಡಿ, ತಾಲೂಕು ಘಟಕ ಉಪಾಧ್ಯಕ್ಷ ವೀರೇಶ ಸಾಸಲಮರಿ, ಜ್ಯೋತಿಲಕ್ಷ್ಮಿ, ಹುಸೇನ್ ಭಾಷಾ, ಮಲ್ಲಪ್ಪ ಬಿ, ಆದೇಶ, ರಮಾದೇವಿ ಶಂಭೋಜಿ, ಶಿವಾನಂದ ಸಾತಿಹಾಳ, ಸೇರಿದಂತೆ ಅನೇಕ ಗಣ್ಯಮಾನ್ಯರು ಇದ್ದರು.

ಉತ್ತಮ ಶಿಕ್ಷಕ ಪ್ರಶಸ್ತಿಗೆ ಬಾಜೀನರಾದ ಛತ್ರಪ್ಪ ಶಿಕ್ಷಕರಿಗೆ ಶುಭಾಶಯಗಳ ಮಹಾಪುರ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು ತಾಲೂಕಿನ ಇಎ ಹೊಸಳ್ಳಿ ಕ್ಯಾಂಪ್ ಶಾಲೆಯ ಶಿಕ್ಷಕರಾದ ಛತ್ರಪ್ಪ ಶಿಕ್ಷಕರು ಕರ್ನಾಟಕ ರಾಜ್ಯ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಸಂಘ(ರಿ)ತಾಲೂಕ ಘಟಕ ಸಿಂಧನೂರ ವತಿಯಿಂದ ನೀಡುವ ತಾಲೂಕ ಉತ್ತಮ ಶಿಕ್ಷಕ ಪ್ರಶಸ್ತಿಗೆ ಬಾಜೀನರಾದರು. ಉತ್ತಮ ಶಿಕ್ಷಕ ಪ್ರಶಸ್ತಿಗೆ ಬಾಜೀನರಾದ ಛತ್ರಪ್ಪ ಶಿಕ್ಷಕರಿಗೆ ಇಎ ಹೊಸಳ್ಳಿ ಕ್ಯಾಂಪ್ ಶಾಲಾ ಶಿಕ್ಷಕ ವರ್ಗದವರು ಸನ್ಮಾನಿಸಿ ಗೌರವಿಸಿದರು.

ಛತ್ರಪ್ಪ ಶಿಕ್ಷಕರು ವಿದ್ಯಾರ್ಥಿಗಳಿಗೆ ಪರಿಸರ ಪ್ರಜ್ಞೆ,ಶಿಕ್ಷಣ,ಕ್ರೀಡೆ ಹಾಗೂ ಇನ್ನಿತರ ವಿಷಯಗಳನ್ನು ಮನ ಮುಟ್ಟುವ ಹಾಗೆ ಬೋಧನೆ ಮಾಡುತ್ತಿರುವುದು ಪೋಷಕರಿಗೆ ಮತ್ತು ವಿದ್ಯಾರ್ಥಿಗಳು ಅಚ್ಚುಮೆಚ್ಚಿನ ಶಿಕ್ಷಕರಗುವುದಕ್ಕೆ ಕಾರಣರಾಗಿದ್ದರು. ಅದೇರೀತಿ ತಾಲೂಕಿನ ಎಲ್ಲಾ ಶಿಕ್ಷಕರ ಜೊತೆಗೆ ಅತ್ಯುತ್ತಮ ಒಡನಾಟ ಹೊಂದಿದ್ದರು.ಅಲ್ಲದೆ ವನಸಿರಿ ಫೌಂಡೇಷನ್ ತಂಡದ ಕಾರ್ಯಗಳನ್ನು ದಿನನಿತ್ಯ



ನೋಡಿ ಕಾರ್ಯಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿ ಇನ್ನಷ್ಟು ಮಾರ್ಗದರ್ಶನವನ್ನು ನೀಡುತ್ತಿದ್ದರು.

ಕಳೆದ ಕೆಲ ವರ್ಷಗಳ ಹಿಂದೆ ಬೋಧಸುತ್ತಿದ್ದ ಕೆ.ಹೊಸಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾಗ ಅಲ್ಲಿನ ನೂತನ ಕಟ್ಟಡದ ಶಾಲೆಯಲ್ಲಿ ಉತ್ತಮ ಶಿಕ್ಷಕರಾಗಿ ಸೇವೆ ಸಲ್ಲಿಸಿದ್ದರು. ಜೊತೆಗೆ ಅಲ್ಲಿ ವನಸಿರಿ ಫೌಂಡೇಷನ್ ಜೊತೆಗೆ ನೆಟ್ಟ ಗಿಡಗಳನ್ನು ಪಾಲನೆ ಪೋಷಣೆ ಮಾಡಿದ್ದಾಕ್ಕಾಗಿ ಇಂದು ಆ ಗಿಡಗಳು ಹೆಮ್ಮರವಾಗಿ ನಿಂತು ಬೆಳೆದು ನಿಂತಿವೆ ಅವೇ ಗಿಡಗಳು ನೋಡುಗರ ಮತ್ತು ವಿದ್ಯಾರ್ಥಿಗಳ ಕಣ್ಮನ ಸೆಳೆಯುತ್ತಿವೆ.ಇಂತಹ ಉತ್ತಮ ಶಿಕ್ಷಕರಿಗೆ ಇಂದು ಕರ್ನಾಟಕ ರಾಜ್ಯ ಪ್ರೌಢ ಶಾಲಾ ಶಿಕ್ಷಕರ ಸಂಘ(ರಿ)ತಾಲೂಕ ಘಟಕ ಸಿಂಧನೂರ ವತಿಯಿಂದ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿರುವುದು ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ತುಂಬಾ ಹೆಮ್ಮೆಯ ವಿಷಯವಾಗಿದೆ.

ಇಂತಹ ಶಿಕ್ಷಕರು ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಕೂಡಾ ಉತ್ತಮ ಶಿಕ್ಷಕರಾಗಿ ಸೇವೆ ಸಲ್ಲಿಸುವಂತಾಗಲಿ ಎಂದು ವನಸಿರಿ ಫೌಂಡೇಷನ್ ಸಾಮಾಜಿಕ ಜಾಲತಾಣ ಅಧ್ಯಕ್ಷ ಚನ್ನಪ್ಪ ಕೆ.ಹೊಸಹಳ್ಳಿ ಹಾಗೂ ಶಾಲೆಯ ಶಿಕ್ಷಕರು,ತಾಲೂಕಿನ ಶಿಕ್ಷಕರು,ಕುಟುಂಬ ವರ್ಗದವರು,ಕೆ ಹೊಸಹಳ್ಳಿ ಹಳೆಯ ವಿದ್ಯಾರ್ಥಿಗಳು ಆಶೀಸಿದರು.

ಈ ಸಂಧರ್ಭದಲ್ಲಿ ಇಎ ಹೊಸಳ್ಳಿ ಕ್ಯಾಂಪ್ ಶಾಲೆಯ ಮುಖ್ಯ ಶಿಕ್ಷಕಿ ವೀಣಾಬಾಯಿ,ಸಹ ಶಿಕ್ಷಕಿಯರಾದ ಶ್ರೀಮತಿ ಆಶಾ,ಚಂದ್ರವತಿ,ವಿಜಯಲಕ್ಷ್ಮಿ,ಚೈತ್ರಾ,ರೋಹಿಣಿ ಹಾಗೂ ಕಂಪ್ಯೂಟರ್ ಶಿಕ್ಷಕಿಯಾದ ಶಾಂತಮ್ಮ ಇತರರು ಈ ಸಂದರ್ಭದಲ್ಲಿ ಭಾಗವಹಿಸಿದ್ದರು.

ಪ್ರಾಣ ಪಣಕ್ಕಿಟ್ಟು ವಿಮಾನ ಪತನ ತಪ್ಪಿಸಿದ ಪೈಲಟ್ ಮಚ್ಚರ್‌ಗೆ 1 ಕೋಟಿ ರೂ. ಬಹುಮಾನ

❑ ನೈಜ್ಯ ದೆಸೆ ನ್ಯೂಸ್

ನವದೆಹಲಿ: ದುಬೈನಿಂದ ಟೆಲ್ ಅವೀವ್‌ಗೆ ಪ್ರಯಾಣಿಸುತ್ತಿದ್ದ ಫ್ಲೈದುಬೈ ವಿಮಾನದಲ್ಲಿ ನಡೆದ ಅಪಹರಣ ಮತ್ತು ವಿಮಾನ ಪತನಗೊಳಿಸುವ ಸಂಚನ್ನು ಜೀವದ ಹಂಗು ತೊರೆದು ವಿಫಲಗೊಳಿಸಿದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರಿಗೆ ಮ್ಯಾನ್‌ಕೈಂಡ್ ಫಾರ್ಮಾ ಸಂಸ್ಥೆಯು 1 ಕೋಟಿ ರೂ.ಗಳ ನಗದು ಬಹುಮಾನ ಘೋಷಿಸಿದೆ.

ತನ್ನ ಅಧಿಕೃತ ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ತಿಳಿಸಿರುವ ಸಂಸ್ಥೆಯು, ಕ್ಯಾಪ್ಟನ್ ಸಿತ್ ಮಚ್ಚರ್ ತಮ ಜೀವಕ್ಕಿಂತ ಹೆಚ್ಚಾಗಿ ಪ್ರಯಾಣಿಕರು ಮತ್ತು ಸಿಬ್ಬಂದಿಯ ಸುರಕ್ಷತೆಗೆ ಆದ್ಯತೆ ನೀಡಿದರು. ಇದು ನಿಜವಾದ ನಾಯಕತ್ವ. ಅವರ ಈ



ಅಸಾಧಾರಣ ಸೇವೆಗೆ ನಮ ಕೃತಜ್ಞತೆಯ ಸಂಕೇತವಾಗಿ 1 ಕೋಟಿ ರೂ. ಬಹುಮಾನ ನೀಡುತ್ತಿದ್ದೇವೆ. ಅವರು ಭಾರತವೇ ಹೆಮ್ಮೆ ಪಡುವಂತೆ ಮಾಡಿದ್ದಾರೆ ಎಂದು ಹೇಳಿದೆ.ಕ್ಯಾಪ್ಟನ್ ಸಿತ್ ಮಚ್ಚರ್ ಅವರ ಸಾಹಸಿಕ ಹಾಗೂ ನಿಸ್ವಾರ್ಥ ಸೇವೆಯನ್ನು ಶ್ಲಾಘಿಸಿರುವ ಪ್ರಮುಖ ಔಷಧೀಯ ಕಂಪನಿ ಮ್ಯಾನ್‌ಕೈಂಡ್ ಫಾರ್ಮಾ, ಕ್ಯಾಪ್ಟನ್ ಸಿತ್ ಹಾಗೂ ಅವರ ಕುಟುಂಬಕ್ಕೆ 1 ಕೋಟಿ ರೂಪಾಯಿ ನಗದು ಬಹುಮಾನವನ್ನು ನೀಡುವುದಾಗಿ ಪ್ರಕಟಿಸಿದೆ.

ಶೌರ್ಯ ಪ್ರಶಸ್ತಿಗೆ ಆಗ್ರಹ: ಕ್ಯಾಪ್ಟನ್ ಸಿತ್ ಅವರ ಶೌರ್ಯವನ್ನು ಗೌರವಿಸಿ ಅವರಿಗೆ ಭಾರತ ಸರ್ಕಾರದ ವತಿಯಿಂದ ಶೌರ್ಯ ಪ್ರಶಸ್ತಿ ನೀಡಬೇಕೆಂದು ಭಾರತೀಯ ಪೈಲಟ್‌ಗಳ ಒಕ್ಕೂಟ ಒತ್ತಾಯಿಸಿದೆ. ಎಫ್ಐಪಿ ಅಧ್ಯಕ್ಷ ಕ್ಯಾಪ್ಟನ್ ಸಿ.ಎಸ್. ರಾಂಧವ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದು, ಪ್ರಾಣಾಪಾಯದ ಸ್ಥಿತಿಯಲ್ಲೂ ಕರ್ತವ್ಯ ನಿರ್ವಹಿಸಿ ನೂರಾರು ಜೀವಗಳನ್ನು ರಕ್ಷಿಸಿದ ಕ್ಯಾಪ್ಟನ್ ಸಿತ್ ಅವರಿಗೆ ಸೂಕ್ತ ಗೌರವ ಮತ್ತು ಪ್ರಶಸ್ತಿ ನೀಡಬೇಕೆಂದು ಕೋರಿದ್ದಾರೆ.

ಘಟನೆಯ ವಿವರ: ಕಳೆದ ಸೆಪ್ಟೆಂಬರ್ 30 (ಬುಧವಾರ) ರಂದು 27 ಮಕ್ಕಳು ಸೇರಿದಂತೆ ಒಟ್ಟು 174 ಪ್ರಯಾಣಿಕರಿದ್ದ ಫ್ಲೈದುಬೈ ಎಫ್‌ಝಡ್1073 ವಿಮಾನವು ದುಬೈನಿಂದ ಟೆಲ್ ಅವೀವ್‌ಗೆ ತೆರಳುತ್ತಿದ್ದಾಗ ಈ ರೋಮಾಂಚಕಾರಿ ಹಾಗೂ ಭೀಕರ ಘಟನೆ ಸಂಭವಿಸಿದೆ. ವಿಮಾನದ ಸಹ–ಪೈಲಟ್, ಒಮಾನ್ ಮೂಲದ ಹಮಾಮ್ ಅಲ್–ಹಮಾಮಿ ಎಂಬಾತ ಕಾಕ್‌ಪಿಟ್‌ನೊಳಗೆ ಕ್ಯಾಪ್ಟನ್ ಸಿತ್ ಮಚ್ಚರ್ ಅವರ ಮೇಲೆ ಚಾಕುವಿನಿಂದ ದಿಢೀರ್ ದಾಳಿ ನಡೆಸಿದ್ದಲ್ಲದೆ, ಕೊಡಲಿ ಏಟು ನೀಡಿ ವಿಮಾನವನ್ನು ಅಪಹರಿಸಿ ಪತನಗೊಳಿಸಲು ಯತ್ನಿಸಿದ್ದ.


ತೀವ್ರ ರಕ್ತಸ್ರಾವ ಮತ್ತು ಗಂಭೀರ ಗಾಯಗಳ ಹೊರತಾಗಿಯೂ ಅಪ್ರತಿಮ ಧೈರ್ಯ ಪ್ರದರ್ಶಿಸಿದ ಕ್ಯಾಪ್ಟನ್ ಸಿತ್, ದಾಳಿಕೋರನನ್ನು ಧೈರ್ಯವಾಗಿ ಎದುರಿಸಿ ಕಾಕ್‌ಪಿಟ್ ಬಾಗಿಲನ್ನು ತೆರೆಯುವಲ್ಲಿ ಯಶಸ್ವಿಯಾದರು.

ರಾತ್ರೋ ರಾತ್ರಿ ಏಕಾಏಕಿ 36ನೇ ಉಪಕಾಲುವೆಗೆ ನೀರು ಬಂದ್ ಮಾಡಿಸಿದ ಜಿಲ್ಲಾಧಿಕಾರಿ! ಸಿಡಿದೆದ್ದ ರೈತರು! ಜನಪ್ರತಿನಿಧಿಗಳು

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು; ಶುಕ್ರವಾರದಂದು ತಡರಾತ್ರಿಯಲ್ಲಿ 36ನೇ ಉಪಕಾಲುವೆಗೆ ಹರಿಯುತ್ತಿರುವ ನೀರನ್ನು ಬಂದ್ ಮಾಡಿದ ಜಿಲ್ಲಾಧಿಕಾರಿ! ವಿಷಯ ತಿಳಿದು ಸುಡಾ ಅಧ್ಯಕ್ಷ ಬಾಬುಗೌಡ ಬಾದರ್ಲಿ ಭೇಟಿ ನೀಡಿ,

ಪರಿಶೀಲಿಸಿ ನೀರು ಬಂದ್ ಮಾಡಿದ್ದನ್ನು ನೋಡಿ ಆಕ್ರೋಶಗೊಂಡು ಬೀಗ ಹಾಕಿದ ಗ್ಯಾಲರಿಯನ್ನು ಮುರಿಯಲು ಪ್ರಯತ್ನಿಸಿದಾಗ ಪೊಲೀಸರು ತಡೆದು ಅವರನ್ನು ಅರೆಸ್ಟ್ ಮಾಡಿ ತುರ್ವಿಹಾಳ ಪೊಲೀಸ್ ಠಾಣೆಗೆ ಕರೆದೊಯ್ದು ಹಿನ್ನೆಲೆಯಲ್ಲಿ ಸಿಂಧನೂರು ನಗರದಲ್ಲಿ ಏಕಾಏಕಿ ದಿಢೀರನೆ ಜನಪ್ರತಿನಿಧಿಗಳು ಪಕ್ಷಾತೀತವಾಗಿ ಪ್ರತಿಭಟನೆಗೆ ಕರೆ ಕೊಟ್ಟ ಹಿನ್ನೆಲೆ ಸಾವಿರಾರು ರೈತರು, ರೈತ ಮುಖಂಡರು, ಹಾಗೂ ಸಾರ್ವಜನಿಕರು ಆಗಮಿಸಿ ನಗರದ ಮಹಾತ್ಮಗಾಂಧಿ ಸರ್ಕಲ್ ಮಧ್ಯಭಾಗದಲ್ಲಿ ಟೆಂಟ್ ಹಾಕಿ ಪ್ರತಿಭಟನೆಗೆ ಕುಳಿತು ಡಿಸಿ ಬಂದು ರೈತರಿಗೆ ಉತ್ತರ ನೀಡುವವರೆಗೆ ನಾವು ಈ ಜಾಗ ಬಿಟ್ಟು ಕದಲುವುದಿಲ್ಲ ಎಂದು ಹಠ ಹಿಡಿದು ಕುಳಿತರು.



ಮೇಲ್ಭಾಗದ ಕಾಲುವೆಗಳನ್ನು ಮುಚ್ಚದೆ, ಸಿಂಧನೂರು ಭಾಗಕ್ಕೆ ನೀರು ಬರುವ ಉಪಕಾಲುವೆಗಳನ್ನು ಮುಚ್ಚಿ ವಾರಬಂಧಿ ನೆಪದಲ್ಲಿ ಬಂದ್ ! ಮಾಡುತ್ತಿರುವುದು ಸಮಂಜಸವಲ್ಲ! ಮಲತಾಯಿ ಧೋರಣೆ ಮಾಡಿದ ಜಿಲ್ಲಾಧಿಕಾರಿ, ಮೇಲ್ಭಾಗದ ಜಿರೋದಿಂದ ನೀರು ಬಂದ್ ಮಾಡಿ ವಾರಬಂಧಿ ಮಾಡಲಿ ಮೇಲ್ಭಾಗಕ್ಕೆ ಇಷ್ಟು ದಿನ ನೀರು ಬಿಟ್ಟು, ಅಲ್ಲದೆ ಫ್ಯಾಕ್ಟರಿಗಳಿಗೂ ಸಹ ನೀರು ಹರಿಸುತ್ತಿದ್ದು, ಮುನಿರಾಬಾದ್ ಐಸಿಸಿ ಸಭೆಯಲ್ಲಿ ತೀರ್ಮಾನಿಸಿದಂತೆ ನೀರು ಬಿಡಲಿ, ಅದು ಬಿಟ್ಟು ಮಧ್ಯಭಾಗದಲ್ಲಿರುವ ನಮ್ಮ ಉಪಕಾಲುವೆಗಳ ನೀರನ್ನು ಬಂದ್ ಮಾಡಿ ಈಗಾಗಲೇ ಭತ್ತ ನಾಟಿ ಮಾಡಿ ಜೋಳ ಬಿತ್ತನೆ ಮಾಡಿ, ಸಂಕಷ್ಟದಲ್ಲಿದ್ದಾರೆ. ಇಂತಹ ಸಮಯದಲ್ಲಿ ಡಿಸಿ ಮೇಡಂ ವಾರಬಂಧಿ ನೆಪದಲ್ಲಿ 36ನೇ ಉಪಕಾಲುವೆ ನೀರನ್ನು ಶುಕ್ರವಾರ ಮಧ್ಯೆ ರಾತ್ರಿಯಲ್ಲಿ ಬಂದ್ ಮಾಡಿ ಸುಮಾರು 10 ರಿಂದ 12 ತಾಸುಗಳವರೆಗೂ ಗಣೇಕಲ್ ಜಲಾಶಯಕ್ಕೆ ನೀರು ಹರಿಸಿದ್ದಾರೆ. ಇವರೇನು ಸರ್ವಾಧಿಕಾರಿನಾ ಎಂದು ಜನಪ್ರತಿನಿಧಿಗಳು ಜಿಲ್ಲಾಧಿಕಾರಿ ವಿರುದ್ಧ ವಾಗ್ದಾಳಿ ನಡೆಸಿದರು.

ಎಸಿ ನಾಗೇಂದ್ರಕುಮಾರ ಮತ್ತು ತಹಶೀಲ್ದಾರ್ ಅರುಣ್ ಕುಮಾರ್ ದೇಸಾಯಿ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ, ಜಿಲ್ಲಾ ಸಚಿವರಾದ ಅಜೇಯ್ ಸಿಂಗ್ ಅವರು ಎರಡ್ಮೂರು ದಿನದಲ್ಲಿ ಬಂದು ಸ್ಥಳೀಯ ರೈತರು ಮತ್ತು ಜನಪ್ರತಿನಿಧಿಗಳನ್ನು ಉದ್ದೇಶಿಸಿ ಸಭೆ ಮಾಡಲಿದ್ದಾರೆ. ಅಲ್ಲಿಯವರೆಗೂ ಯಾವ ಉಪಕಾಲುವೆಗಳ ನೀರನ್ನು ಬಂದ್ ಮಾಡುವುದಿಲ್ಲ ಎಂದು ಭರವಸೆ ಪ್ರತಿಭಟನೆ ಕೈಬಿಡಲಾಯಿತು. ತಡರಾತ್ರಿಯಲ್ಲಿ ಬಂದ್ ಮಾಡಿದ 36ನೇ ಉಪಕಾಲುವೆ ನೀರನ್ನು ಸಹ ಕಾಲುವೆಗೆ ಹರಿ ಬಿಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ: ಕೃಷಿ ಬೆಲೆ ಆಯೋಗದ ಮಾಜಿ ಅಧ್ಯಕ್ಷ ಹನುಮನಗೌಡ ಬೆಳಗುರ್ಕಿ, ಪಂಪನಗೌಡ ಬಾದರ್ಲಿ, ರಾಜುಗೌಡ ಬಾದರ್ಲಿ, ಅಶೋಕ ಉಮಲೂಟಿ, ತಿಮ್ಮಯ್ಯ ನಾಯಕ, ಅನಿಲಕುಮಾರ ವೈ, ಬಸವರಾಜ ಹಿರೇಗೌಡರ್, ಧರ್ಮನಗೌಡ, ಖಾಜಿ ಮಲ್ಲಿಕ್, ಮಲ್ಲಯ್ಯ ಮಾಡಸಿರವಾರ, ಶಂಕರಗೌಡ ಕಲ್ಲೂರು, ಬಸವಂತರಾಯಗೌಡ ಕಲ್ಲೂರು, ಯಂಕನಗೌಡ ಬೂತಲದಿನ್ನಿ, ಗಫೂರ್ ಸಾಬ್, ಬಂದೇನವಾಜ್, ಶರಣಪ್ಪ ಅಂಗಡಿ, ಸೋಮನಾಥ, ವೀರೇಶ ಭಾವಿಮನಿ, ತಿಮ್ಮನಗೌಡ ಮಲ್ಲಾಪುರ, ದಾಸರಿ ಸತ್ಯನಾರಾಯಣ, ಛತ್ರಪ್ಪ ಕುರುಕುಂದಿ, ಈರೇಶ ಇಲ್ಲೂರು, ವಕೀಲರ ಸಂಘದ ಅಧ್ಯಕ್ಷ ಭೀಮನಗೌಡ, ವಕೀಲರಾದ ಎಚ್.ರಾಮನಗೌಡ, ಸೇರಿದಂತೆ ಅನೇಕ ರೈತರು, ರೈತ ಮುಖಂಡರು, ಸಾರ್ವಜನಿಕರು ಈ ಬೃಹತ್ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ವಚನ ದರ್ಶನ

ಜನಿತಕ್ಕೆ ತಾಯಾಗಿ ಹೆತ್ತಳು ಮಾಯೆಮೋಹಕ್ಕೆ ಮಗಳಾಗಿ ಹುಟ್ಟಿದಳು ಮಾಯೆಕೂಟಕ್ಕೆ ಸ್ತ್ರೀಯಾಗಿ ಕೂಡಿದಳು ಮಾಯೆಇದಾವಾವ ಪರಿಯಲ್ಲಿ ಕಾಡಿತ್ತು ಮಾಯೆಈ ಮಾಯೆಯ ಕಳೆವಡೆ ಎನ್ನಳವಲ್ಲನೀವೇ ಬಲ್ಲಿರಿ ಕೂಡಲಸಂಗಮದೇವಾ!

ಇದು ವಿಶ್ವಗುರು ಬಸವಣ್ಣನವರ ಪ್ರಸಿದ್ಧ ವಚನವಾಗಿದೆ.

ಮಾಯೆಯು ಮನುಷ್ಯನ ಹುಟ್ಟಿಗೆ ತಾಯಾಗಿ ಜನ್ಮ ನೀಡುತ್ತಾಳೆ, ಮೋಹಕ್ಕೆ ಮಗಳಾಗಿ ಹುಟ್ಟುತ್ತಾಳೆ ಮತ್ತು ಸಂಸಾರ ಅಥವಾ ಕೂಟಕ್ಕೆ ಸ್ತ್ರೀಯಾಗಿ (ಹೆಂಡತಿಯಾಗಿ) ಕೂಡುತ್ತಾಳೆ. ಈ ಮಾಯೆಯು ನಾನಾ ವಿಧವಾಗಿ ಮನುಷ್ಯನನ್ನು ಕಾಡುತ್ತದೆ. ಇಂತಹ ಪ್ರಬಲವಾದ ಮಾಯೆಯನ್ನು ಕಳಚಿಹಾಕುವುದು ಅಥವಾ ಗೆಲ್ಲುವುದು ನನ್ನೊಬ್ಬನಿಂದ ಸಾಧ್ಯವಿಲ್ಲ, ಹೇ ಕೂಡಲಸಂಗಮದೇವಾ, ಇದನ್ನು ನಿನ್ನ ಕೃಪೆಯಿಂದ ನೀನೇ ಬಲ್ಲೆ ಮತ್ತು ಅದನ್ನು ನಿವಾರಿಸಬೇಕು ಮನುಕುಲದ ದಾರಿದೀಪ ವಚನಗಳು ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ವಿಪಕ್ಷ ನಾಯಕರ ಧರಣಿ ಹಾಸ್ಯಾಸ್ಪದ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ದೇಶದಲ್ಲಿ ಚುನಾವಣಾ ಆಯೋಗ ನಡೆಸುತ್ತಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ನೈಜಮತದಾರರ ಹೆಸರುಗಳನ್ನು ಕೈಬಿಡುತ್ತಿರುವ ಹಿನ್ನೆಲೆಯಲ್ಲಿ ಮತದಾರರಿಗೆ ತನ್ನ ಮತದಾನದ ಹಕ್ಕನ್ನ ಪಡೆಯಲು ಹಾಗೂ ಒದಗಿಸಿಕೊಡಲು ಕಾಂಗ್ರೆಸ್ ಪಕ್ಷ ನಡೆಸುತ್ತಿರುವ ಹೋರಾಟದ ಬಗ್ಗೆ ಬಿಜೆಪಿಯ ಅಂಧ ಭಕ್ತರು ಹಾಗೂ ಕಾನೂನಿನ ಹಾಗೂ ಪ್ರಜಾಪ್ರಭುತ್ವದ ಅರಿವಿಲ್ಲದ ವಿರೋಧ ಪಕ್ಷದ ನಾಯಕರು ಪೊಲೀಸ್ ಆಯುಕ್ತರ ಕಚೇರಿ ಮುಂದೆ ಧರಣಿ ನಡೆಸಿರುವುದು ಹಾಸ್ಯಸ್ಪದ ಹಾಗೂ ಪ್ರಜಾಪ್ರಭುತ್ವದ ವಿರೋಧಿ ಧೋರಣೆಯಾಗಿದೆ ಎಂದು ಕೆಪಿಸಿಸಿ ಪ್ರದಾನಕಾರ್ಯದರ್ಶಿ ಎಸ್ ಮನೋಹರ್ ತಿಳಿಸಿದ್ದಾರೆ.



ಸಂವಿಧಾನ ಹಾಗೂ ಪ್ರಜಾಪ್ರಭುತ್ವ ಉಳಿಯಬೇಕಾದರೆ ಹಾಗೂ ಗಟ್ಟಿಯಾಗಬೇಕಾದರೆ ಒಂದು ಪ್ರಾಮಾಣಿಕ ನೈಜ ಸರ್ಕಾರ ಸ್ಥಾಪನೆಗೆ ಮತದಾರರೇ ಮೂಲ ಕಾರಣಕರ್ತರು, ದೇಶದಲ್ಲಿ ಮೋದಿಯ ಸರ್ಕಾರದಲ್ಲಿ ನಡೆಯುತ್ತಿರುವ ಪ್ರಜಾಪ್ರಭುತ್ವದ ಕಗ್ಗೊಲೆಯನ್ನು ಬಿಜೆಪಿ ಅಂಧ ಭಕ್ತರು ಕಣ್ಣಾರೆ ಕಂಡು ನಿದ್ರಿಸುತ್ತಿದ್ದಾರೆ ಅದನ್ನು ಪ್ರಶ್ನಿಸಲು ಹೋದರೆ ಹಾಗೂ ಹೋರಾಟ ನಡೆಸಿ ದೇಶದ ನಾಗರಿಕರಿಗೆ ಮತದಾನದ ಹಕ್ಕನ್ನ ನೀಡಬೇಕೆಂದು ಹೋರಾಟ ನಡೆಸಿದರೆ ಹೋರಾಟ ನಡೆಸಿದವರ ವಿರುದ್ಧವೇ ದೂರು ಸಲ್ಲಿಸುತ್ತಿರುವುದು ದೇಶದ ಇತಿಹಾಸದಲ್ಲಿ ಇದೆ ಮೊದಲು ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪ್ರತಿಯೊಬ್ಬ ನಾಗರಿಕರಿಗೂ ಮತದಾನ ಮಾಡುವುದು ಅವರ ಹಕ್ಕು ಮತದಾನ ಮಾಡಲು ಅವರಿಗೆ ಅವಕಾಶ ಕಲ್ಪಿಸಿ ಕೊಡಬೇಕೆಂದು ಸುಮಾರು ಎರಡು ವರ್ಷಗಳಿಂದ ವಿರೋಧ ಪಕ್ಷದ ನಾಯಕರಾದ ಶ್ರೀ ರಾಹುಲ್ ಗಾಂಧಿ ರವರು ಇಡೀ ದೇಶ ವ್ಯಾಪ್ತಿ ಜಾಗೃತಿ ಮೂಡಿಸಿ ವೋಟ್ ಚೋರಿ ಎಂಬ ಹಗಲು ದರೋಡೆಯನ್ನು ನಡೆಸಿರುವ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಧ್ವನಿ ಎತ್ತಿದ್ದಾರೆ, ಚುನಾವಣಾ ಆಯೋಗದ ವಿರುದ್ಧ ಹೋರಾಟ ನಡೆಸಿದರೆ ಪ್ರತಿ ಹಂತದಲ್ಲಿ ಬಿಜೆಪಿ ನಾಯಕರು ಇದರ ಬಗ್ಗೆ ಪ್ರಶ್ನೆ ಮಾಡುತ್ತಿದ್ದಾರೆ ಹಾಗಾದರೆ ಇವರು ಮತದಾರರ ವಿರೋಧಿಗಳು ಎಂಬುದು ಈಗ ಸಾಬೀತಾಗಿದೆ,

ದೇಶದಲ್ಲಿ ಆಡಳಿತ ನಡೆಸುತ್ತಿರುವ ಕೇಂದ್ರ ಬಿಜೆಪಿ ಸರ್ಕಾರ ಹಾಗೂ ಪ್ರಧಾನಿ ನರೇಂದ್ರ ಮೋದಿ ರವರ ಸರ್ಕಾರ ಅದು ಪ್ರಜಾಪ್ರಭುತ್ವದ ಅಡಿಯಲ್ಲಿ ಸಂಪೂರ್ಣವಾಗಿ ನೈಜ್ಯ ಮತದಾರ-ರಿಗೆ ಹಕ್ಕನ್ನು ನೀಡಿ ಅಧಿಕಾರ ನಡೆಸುತ್ತಿರುವ ಸರ್ಕಾರ ಅಲ್ಲ ಎಂಬುದು ಈಗ ಚುನಾವಣೆ ಆಯೋಗ ಕೈಗೊಂಡಿರುವ ನಿರ್ಧಾರ ಹಾಗೂ ಮರುಪರಿಶೀಲನೆ ಆದೇಶದಲ್ಲಿ ಬಹಿರಂಗವಾಗಿದೆ, ಕೇಂದ್ರ ಚುನಾವಣಾ ಆಯೋಗದ ಆಯುಕ್ತ ಜ್ಞಾನೇಶ್ ಕುಮಾರ್ ವಜಾಕ್ಕೆ ನಡೆಯುತ್ತಿರುವ ದೇಶವ್ಯಾಪ್ತಿ ಚಳುವಳಿಯ ಹಿನ್ನೆಲೆಯಲ್ಲಿ ಜ್ಞಾನೇಶ್ ಕುಮಾರ್ ಮುಖ್ಯ ಚುನಾವಣಾ ಆಯುಕ್ತ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಕಾಂಗ್ರೆಸ್ ಮುಖಂಡ ರಾದ ಎ.ಆನಂದ,ಕುಶಾಲ್ ಹರವೇಗೌಡ, ಪುಟ್ಟರಾಜು, ಮಾಧವ ಹನೂರು ಅವರು ಆಗ್ರಹಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ದಸರಾ ಗಿಫ್ಟ್: ವಂದೇ ಭಾರತ್ ಸ್ಲೀಪರ್ ರೈಲು ಕಲ್ಯಾಣ ಕರ್ನಾಟಕ ಮಾರ್ಗದಲ್ಲಿ ಲಭ್ಯ: ಡಾ.ಬಾಬುರಾವ್

ನೈಜ್ಯ ದೆಸೆ ನ್ಯೂಸ್

ರಾಯಚೂರು: ದೂರದ ಪ್ರಯಾಣ ಮಾಡುವ ಪ್ರಯಾಣಿಕರ ಅನುಕೂಲಕ್ಕಾಗಿ ವಂದೇ ಭಾರತ್ ಸ್ಲೀಪರ್ ರೈಲು ಮತ್ತೊಂದು ಮಾರ್ಗದಲ್ಲಿ ಶೀಘ್ರದಲ್ಲೇ ಲಭ್ಯವಾಗಲಿದೆ ಎಂದು ರೈಲ್ವೆ ಸಲಹಾ ಮಂಡಳಿಯ ಸದಸ್ಯ ಡಾ.ಬಾಬುರಾವ್ ತಿಳಿಸಿದ್ದಾರೆ.

ದೇಶದ ಆರ್ಥಿಕ ರಾಜಧಾನಿ ಮುಂಬೈ ಮತ್ತು ತಂತ್ರಜ್ಞಾನ ರಾಜಧಾನಿ ಎಂದು ಗುರುತಿಸಲ್ಪಟ್ಟ ಬೆಂಗಳೂರು ನಡುವೆ ಎರಡನೇ ವಂದೇ ಭಾರತ್ ಸ್ಲೀಪರ್ ರೈಲು ಸೇವೆ ನೀಡಲಿದೆ. ದಸರಾ ಕೊಡುಗೆಯಾಗಿ ಈ ರೈಲು ಸೇವೆ ಲಭ್ಯವಾಗುವ ಸಾಧ್ಯತೆ ಇದೆ ಎಂದು ರೈಲ್ವೆ ಇಲಾಖೆ ಮಾಹಿತಿ ನಿಡಿರುವುದಾಗಿ ಅವರು ಹೇಳಿದ್ದಾರೆ.

ಈಗಾಗಲೇ ಈ ಹೊಸ ರೈಲಿಗೆ ರೈಲ್ವೆ ಮಂಡಳಿ ಅನುಮೋದನೆ ನೀಡಿದ್ದು, ಪ್ರಾರಂಭದ ದಿನಾಂಕದ ಬಗ್ಗೆ ಶೀಘ್ರದಲ್ಲೇ ಸ್ಪಷ್ಟನೆ ಬರಲಿದೆ. ಮುಂಬೈ-ಬೆಂಗಳೂರು ವಂದೇ ಭಾರತ್ ಸ್ಲೀಪರ್ ರೈಲು ವಾರದಲ್ಲಿ ಆರು ದಿನಗಳು ಸಂಚರಿಸಲಿದೆ. ಬೆಂಗಳೂ-ರಿನಿಂದ ಸೋಮವಾರ ಹೊರತುಪಡಿಸಿ, ಮುಂಬೈನಿಂದ ಮಂಗಳವಾರ ಹೊರತುಪಡಿಸಿ ಈ ರೈಲು (ರೈಲು ಸಂಖ್ಯೆ 27652) ಪ್ರಯಾಣಿಕರಿಗೆ ಸೇವೆ ನೀಡಲಿದೆ. ಪ್ರತಿದಿನ ರಾತ್ರಿ 10 ಗಂಟೆಗೆ ಬೆಂಗಳೂರಿನಲ್ಲಿ ಹೊರಟು ಮರುದಿನ ಮಧ್ಯಾಹ್ನ 1.50ಕ್ಕೆ ಮುಂಬೈ ತಲುಪುತ್ತದೆ. ಮುಂಬೈನಿಂದ ರಾತ್ರಿ 10.30ಕ್ಕೆ ಹೊರಡುವ ಈ ವಂದೇ ಭಾರತ ಸ್ಲೀಪರ್ ರೈಲು (ರೈಲು ಸಂಖ್ಯೆ 27651) ಮರುದಿನ ಮಧ್ಯಾಹ್ನ 2.50ಕ್ಕೆ ಬೆಂಗಳೂರು ತಲುಪುತ್ತದೆ. ಒಟ್ಟು 16 ಗಂಟೆಗಳ ಸಮಯ ತೆಗೆದುಕೊಳ್ಳುತ್ತದೆ.



ಬೆಂಗಳೂರು - ಮುಂಬೈ ವಂದೇ ಭಾರತ್ ಸ್ಲೀಪರ್ ರೈಲು ಮಾರ್ಗ ಮಧ್ಯದಲ್ಲಿ ಆಂಧ್ರಪ್ರದೇಶದಲ್ಲಿರುವ ಅನಂತಪುರ, ಗುಂತಕಲ್ ನಿಲ್ದಾಣಗಳಲ್ಲಿ ನಿಲ್ಲುತ್ತದೆ. ಜೊತೆಗೆ ಕರ್ನಾಟಕದ ರಾಯಚೂರು, ಕಲಬುರಗಿ ಹಾಗೂ ಮಹಾರಾಷ್ಟ್ರದ ಸೋಲಾಪುರ, ಪುಣೆ ನಿಲ್ದಾಣಗಳಲ್ಲಿ ನಿಲುಗಡೆಯಾಗುತ್ತದೆ ಎಂದು ತಿಳಿಸಿದ್ದಾರೆ.

ಪ್ರಸ್ತುತ ಮುಂಬೈ-ಬೆಂಗಳೂರು ನಗರಗಳ ಮಧ್ಯೆ ಉದ್ಯಾನ್ ಎಕ್ಸ್‌ಪ್ರೆಸ್ ಈಗಾಗಲೇ ಸಂಚರಿಸುತ್ತಿದೆ. ಈ ರೈಲು 24ಗಂಟೆಗಳ ಪ್ರಯಾಣದ ಸಮಯ ತೆಗೆದುಕೊಳ್ಳುತ್ತಿದೆ. ಈ ವಂದೇ ಭಾರತ್ ಸ್ಲೀಪರ್ ರೈಲು ಸೌಲಭ್ಯದಿಂದ 8 ತಾಸುಗಳ ಅಮೂಲ್ಯ ಸಮಯ ಉಳಿಯಲಿದೆ.

ಪಶ್ಚಿಮ ಬಂಗಾಳದಲ್ಲಿನ ಹೌರಾ - ಅಸ್ಸಾಂನಲ್ಲಿನ ಗುವಾಹಟಿ (ಕಾಮಾಖ್ಯ) ನಡುವೆ ಮೊದಲ ವಂದೇ ಭಾರತ್ ಸ್ಲೀಪರ್ ರೈಲು ಈ ವರ್ಷದ ಜನವ-ರಿಯಲ್ಲಿ ಪ್ರಯಾಣಿಕರಿಗೆ ಲಭ್ಯವಾಗಿರುವುದು ಎಲ್ಲರಿಗೂ ತಿಳಿದ ವಿಷಯವಾಗಿದೆ ಎಂದಿದ್ದಾರೆ.

ಈ ರೈಲನ್ನು ಕಲಬುರಗಿ ಮಾರ್ಗವಾಗಿಯೇ ಓಡಿಸಬೇಕೆಂದು ರೈಲ್ವೆ ಸಚಿವರಿಗೆ ಮನವಿ ಸಲ್ಲಿಸಿ ಮನವ-ರಿಕೆ ಮಾಡಲಾಗಿದ್ದು ಈಗ ಫಲ ನೀಡಿದೆ ಎಂದು ಅವರು ಹರ್ಷ ವ್ಯಕ್ತಪಡಿಸಿದ್ದಾರೆ. ಕಲ್ಯಾಣ ಕರ್ನಾಟಕದ ಜನರು ಇದರ ಪ್ರಯೋಜನ ಪಡೆದುಕೊಳ್ಳಬೇಕೆಂದು ಮನವಿ ಮಾಡಿಕೊಂಡಿರುವ ಅವರು ಈ ಸೌಲಭ್ಯ ಒದಗಿಸಿರುವ ಪ್ರಧಾನಿ ನರೇಂದ್ರ ಮೋದಿ, ರೇಲ್ವೆ ಸಚಿವರಾದ ಅಶ್ವಿನಿ ವೈಷ್ಣವ ಹಾಗೂ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಅಭಿನಂದನಾರ್ಹರು ಎಂದಿದ್ದಾರೆ.

ಹೃದಯದ ಆರೋಗ್ಯ ಕಾಪಾಡಿಕೊಳ್ಳಲು ಮುನ್ನೆಚ್ಚರಿಕೆ ಅಗತ್ಯ

ವಿಶ್ವ ಹೃದಯ ದಿನಾಚರಣೆ: 88 ಮಂದಿಗೆ ಉಚಿತ ಬಿಪಿ, ಮಧುಮೇಹ ತಪಾಸಣೆ

ನೈಜ್ಯ ದೆಸೆ ನ್ಯೂಸ್

ಸಿರುಗುಪ್ಪ: ಬದಲಾದ ಜೀವನಶೈಲಿ, ದೈಹಿಕ ಚಟುವಟಿಕೆಗಳ ಕೊರತೆ, ಅಸಮರ್ಪಕ ಆಹಾರ ಸೇವನೆ ಹಾಗೂ ಧೂಮಪಾನ, ಮದ್ಯಪಾನ ಸೇ-ರಿದಂತೆ ವಿವಿಧ ವ್ಯಸನಗಳಿಂದ ಹೃದಯ ಸಂಬಂಧಿ ಕಾಯಿಲೆಗಳ ಅಪಾಯ ಹೆಚ್ಚಾಗುತ್ತಿದೆ. ಹೀಗಾಗಿ ಸಕಾಲದಲ್ಲಿ ಆರೋಗ್ಯ ತಪಾಸಣೆ ಮಾಡಿಸಿಕೊಂಡು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸಾರ್ವಜನಿಕ ಆಸ್ಪತ್ರೆಯ ಕಣ್ಣಿನ ತಜ್ಞ ಶರಣಪ್ಪ ಸಲಹೆ ನೀಡಿದರು.

ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಮಂಗಳವಾರ ವಿಶ್ವ ಹೃದಯ ದಿನಾಚರಣೆ ಅಂಗವಾಗಿ ಅಸಾಂಕ್ರಾಮಿಕ ರೋಗಗಳ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇಂದಿನ ಜೀವನಶೈಲಿಯಲ್ಲಿ ದೈಹಿಕ ಚಟುವಟಿಕೆ ಕಡಿಮೆಯಾಗಿದ್ದು, ಪೌಷ್ಟಿಕಾಂಶವಿಲ್ಲದ ಆಹಾರ, ಜಂಕ್ ಫುಡ್, ಧೂಮಪಾನ, ಮದ್ಯಪಾನ



ಹಾಗೂ ಮಾದಕ ವಸ್ತುಗಳ ಸೇವನೆಯಂತಹ ಅಭ್ಯಾಸಗಳು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿವೆ. ರಾಸಾಯನಿಕ ಬಣ್ಣ ಹೊಂದಿರುವ ಪಾನೀಯಗಳ ಅತಿಯಾದ ಸೇವನೆಯೂ ಆರೋಗ್ಯಕ್ಕೆ ಹಾನಿಕರವಾಗಬಹುದು. ಇಂತಹ ಜೀವನಶೈಲಿಯಿಂದ ಹೃದಯ ಸಂಬಂಧಿ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿದ್ದು, ಲಕ್ಷಣಗಳನ್ನು ನಿರ್ಲಕ್ಷಿಸದೆ ಸೂಕ್ತ ಸಮಯದಲ್ಲಿ ವೈದ್ಯರನ್ನು ಸಂಪರ್ಕಿಸಬೇಕು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮೊಹಮ್ಮದ್ ಖಾಸಿಂ ಮಾತನಾಡಿ, 30 ವರ್ಷ ಮೇಲ್ಪಟ್ಟವರು ನಿಯಮಿತವಾಗಿ ರಕ್ತದೊತ್ತಡ ಮತ್ತು ಮಧುಮೇಹ ತಪಾಸಣೆ ಮಾಡಿಸಿಕೊಳ್ಳಬೇಕು. ಮೆಟ್ಟಿಲು ಏರುವಾಗ ಅತಿಯಾದ ಆಯಾಸ, ಎಡಗೈಯಲ್ಲಿ ಸೆಳೆತ ಅಥವಾ ಎದೆ ಭಾಗದಲ್ಲಿ ನೋವು ಕಾಣಿಸಿಕೊಂಡರೆ ನಿರ್ಲಕ್ಷಿಸದೆ ತಕ್ಷಣ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕು. ಅಗತ್ಯವಿದ್ದಲ್ಲಿ ಇಸಿಜಿ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಆರೋಗ್ಯವಂತ ಹೃದಯಕ್ಕಾಗಿ ಪ್ರತಿದಿನ ಯೋಗ, ಧ್ಯಾನ ಹಾಗೂ ನಿಯಮಿತ ದೈಹಿಕ ಚಟುವಟಿ-ಕೆ ರೂಢಿಸಿಕೊಳ್ಳುವುದರ ಜತೆಗೆ ಸಮತೋಲಿತ ಆಹಾರ ಸೇವನೆಗೆ ಆದ್ಯತೆ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕ ಆಸ್ಪತ್ರೆಯ ದಂತ ವೈದ್ಯ ಡಾ. ಪವನ್ ವರ್ಮ, ವೈದ್ಯರಾದ ಡಾ. ಶ್ರೀಹರಿ, ಡಾ. ಕಲಂದರ್, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿಯ ಬಿಪಿಎಂ ಪ್ರಹ್ಲಾದ್, ಹಿರಿಯ ನಿರೀಕ್ಷಣಾಧಿಕಾರಿ ಭೀಮರೆಡ್ಡಿ, ಸಾಂಕ್ರಾಮಿಕ ರೋಗಶಾಸ್ತ್ರಜ್ಞ ನವೀನ್ ಕುಮಾರ್, ಎನ್‌ಸಿಡಿ ವಿಭಾಗದ ಆಪ್ತ ಸಮಾಲೋಚಕ ಮಲ್ಲೇಶಪ್ಪ ಸೇ-ರಿದಂತೆ ಆರೋಗ್ಯ ಸಿಬ್ಬಂದಿ, ಸಾರ್ವಜನಿಕರು ಹಾಗೂ ಪತ್ರಿಕಾ ಮಾಧ್ಯಮದವರು ಉಪಸ್ಥಿತರಿದ್ದರು.

ಶಿಬಿರದಲ್ಲಿ ಸುಮಾರು 88 ಮಂದಿಗೆ ರಕ್ತದೊತ್ತಡ ಮತ್ತು ಮಧುಮೇಹದ ಉಚಿತ ತಪಾಸಣೆ ನಡೆಸಲಾಯಿತು.

ವರದಿ : ಮಸೀದಿ,ಅಬ್ದುಲ್ ಗೌಸ್, ಸಿರುಗುಪ್ಪ

ಸರಿಯಾಗಿ ಕರ್ತವ್ಯ ನಿರ್ವಹಿಸದ ಆಶಾ ಕಾರ್ಯಕರ್ತೆ ವಿರುದ್ಧ ಕ್ರಮಕ್ಕೆ ದಲಿತ ಸೇನೆ ಒತ್ತಾಯ

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ತಾಲೂಕಿನ ಹೂನೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಮಾಕಾಪೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆಶಾ ಕಾರ್ಯಕರ್ತೆ ಯಾಗಿರುವ ಯಂಕಮ್ಮ ಗಂಡ ಅಡಿವೆಪ್ಪ ಸಾ? ತಲೆಕಟ್ಟು ಇವರು ಸರಿಯಾಗಿ ಕೆಲಸ ಮಾಡದೇ ಮನೆಯಲ್ಲಿ ಕುಳಿತು ವೇತನ ಪಡೆಯುತ್ತಿದ್ದಾರೆಂದು ಆರೋಪಿಸಿ ದಲಿತ ಸೇನೆಯ ತಾಲೂಕ ಅಧ್ಯಕ್ಷ ಬಸವರಾಜ್ ಗೊಸ್ಲೆ ತಾಲೂಕ ಆರೋಗ್ಯಾಧಿಕಾರಿಗೆ ಮನವಿಯನ್ನು ಸಲ್ಲಿಸಿದರು .

ಬಡ ಮಹಿಳೆಯರಿಗೆ ಸರಿಯಾದ ಯಾವುದೇ ಮಾಹಿತಿ ನೀಡುವುದಿಲ್ಲ. ಗರ್ಭಿಣಿ ಸ್ತ್ರೀಯರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತಿಲ್ಲ. ಅಲ್ಲದೇ ತಾಯಿ ಕಾರ್ಡ್ ಮಾಡಿಕೊಡದೇ ನಿರ್ಲಕ್ಷ್ಯವಹಿಸುತ್ತಾಳೆ. ಈ ಬಗ್ಗೆ ವಿಚಾರಿಸಿದರೆ ನನ್ನನ್ನು ಕೇಳಲು ನೀವು



ಯಾರು? ಅದೇನು ಕೇಳಬೇಕಿದ್ದರು ತಾಲೂಕು ಆರೋಗ್ಯಾಧಿಕಾರಿಗಳನ್ನು ಕೇಳಿ ನಿಮಗೆ ಏನು ಬೇಕಾದರು ಅವರ ಹತ್ತಿರವೇ ಕೇಳಿ ಕೆಲಸ ಮಾಡಿಸಿಕೊಳ್ಳಿ ಎಂದು ದರ್ಪದಿಂದ ಹೇಳುತ್ತಿದ್ದಾಳೆ. ಸರಿಯಾಗಿ ಕೆಲಸ ಮಾಡದೇ ದರ್ಪದಿಂದ ಮೇರೆಯುತ್ತಿರುವ ಹಾಗೂ ತಾಲೂಕು ಅಧಿಕಾರಿಗಳನ್ನೇ ಕೇಳಿ ಎಂದು ಹೇಳುತ್ತಿರುವ ಆಶಾ ಕಾರ್ಯಕರ್ತೆಯ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಂಡು ಅವರನ್ನು ಕೆಲಸದಿಂದ ಅಮಾನತ್ತು ಮಾಡಬೇಕು. ಒಂದು ವೇಳೆ ನಮ್ಮ ಮನವಿಗೆ ಸ್ಪಂಧಿಸದಿದ್ದರೆ ತಮ್ಮ ಕಾರ್ಯಾಲಯದ ಮುಂದೆ ಪ್ರತಿಭಟನಾ ಧರಣಿ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಒತ್ತಾಯಿಸಿದರು . ಈ ಸಂದರ್ಭದಲ್ಲಿ ವಿಶ್ವನಾಥ್ , ಹನುಮಂತ , ಬಸವರಾಜ್ , ಛತ್ರಪ್ಪ , ನಾಗರಾಜ್ ,ಹಾಲ್ತಾಫ್ ಸೇ-ರಿದಂತೆ ಇತರರು ಇದ್ದರು .

ಪಿಯುಸಿ ನಂತರ ಈಗ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಶುಲ್ಕವೂ ಹೆಚ್ಚಳ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ದ್ವಿತೀಯ ಪಿಯುಸಿ ಪರೀಕ್ಷಾ ಶುಲ್ಕವನ್ನು ಶೇ.50ರಷ್ಟು ಹೆಚ್ಚಿಸಿದ ಬೆನ್ನಲ್ಲೇ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ 2026-27ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಶುಲ್ಕವನ್ನೂ ಪರಿಷ್ಕರಿಸಿದೆ. ಇದೇ ಮೊದಲ ಬಾರಿಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು 710ರಿಂದ 746ಕ್ಕೆ ಹೆಚ್ಚಿಸಲಾಗಿದ್ದು, ಒಟ್ಟಾರೆ ಶೇ.5ರಷ್ಟು ಏರಿಕೆಯಾಗಿದೆ.

KSEABಹೊರಡಿಸಿರುವ ಸುತ್ತೋಲೆಯ ಪ್ರಕಾರ, ಪರೀಕ್ಷೆ ನಡೆಸುವ ವೆಚ್ಚ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ವಿವಿಧ ವರ್ಗಗಳ ಅಭ್ಯರ್ಥಿಗಳಿಗೆ



ಅನ್ವಯಿಸುವ ಪರೀಕ್ಷೆ, ನೋಂದಣಿ ಹಾಗೂ ಮರುಪ-ರೀಕ್ಷಾ ಶುಲ್ಕಗಳನ್ನು ಪರಿಷ್ಕರಿಸಲಾಗಿದೆ. ರಾಜ್ಯದಲ್ಲಿ ಪ್ರತಿವರ್ಷ ಸುಮಾರು 8.5 ಲಕ್ಷ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುತ್ತಿರುವ ಹಿನ್ನೆಲೆಯಲ್ಲಿ ಶುಲ್ಕ ಹೆಚ್ಚಳವು ದೊಡ್ಡ ಸಂಖ್ಯೆಯ ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳ ಮೇಲೆ ನೇರ ಪರಿಣಾಮ ಬೀರುವ ಸಾಧ್ಯತೆಯಿದೆ.

ಖಾಸಗಿ ಅಭ್ಯರ್ಥಿಗಳಿಗೂ ಶುಲ್ಕ ಹೆಚ್ಚಳ : ಖಾಸಗಿ ಅಭ್ಯರ್ಥಿಗಳ ನೋಂದಣಿ ಮತ್ತು ಅರ್ಜಿ ಶುಲ್ಕ 248ರಿಂದ 260ಕ್ಕೆ ಏರಿಕೆಯಾಗಿದೆ. ಈಗಾಗಲೇ ನೋಂದಾಯಿಸಿಕೊಂಡು ಮರುಪರೀಕ್ಷೆಗೆ ಹಾಜರಾಗುವ ಖಾಸಗಿ ಅಭ್ಯರ್ಥಿಗಳ ನೋಂದಣಿ ನವೀಕರಣ ಶುಲ್ಕವನ್ನು 72ರಿಂದ 76ಕ್ಕೆ ಪರಿಷ್ಕರಿಸಲಾಗಿದೆ.

ಮರುಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೂ ಹೊಸ ಶುಲ್ಕ ಅನ್ವಯವಾಗಲಿದೆ. ಒಂದು ವಿಷಯಕ್ಕೆ 448ರಿಂದ 470ಕ್ಕೆ, ಎರಡು ವಿಷಯಗಳಿಗೆ 559ರಿಂದ 587ಕ್ಕೆ ಹಾಗೂ ಮೂರು ಅಥವಾ ಅದಕ್ಕಿಂತ ಹೆಚ್ಚಿನ ವಿಷಯಗಳಿಗೆ 752ರಿಂದ 790ಕ್ಕೆ ಶುಲ್ಕ ಹೆಚ್ಚಿಸಲಾಗಿದೆ.

ಪಿಯುಸಿ ಶುಲ್ಕ ಏರಿಕೆ ಬೆನ್ನಲ್ಲೇ ಎಸ್‌ಎಸ್‌ಎಲ್‌ಸಿ ಮೇಲೂ ಹೊರೆ : ಎಸ್‌ಎಸ್‌ಎಲ್‌ಸಿ ಶುಲ್ಕ ಪರಿಷ್ಕರಣೆಗೂ ಮುನ್ನವೇ ದ್ವಿತೀಯ ಪಿಯುಸಿ ಪರೀಕ್ಷಾ ಶುಲ್ಕದಲ್ಲಿ ಸುಮಾರು ಎಂಟು ವರ್ಷಗಳ ಬಳಿಕ ಶೇ.50ರಷ್ಟು ಹೆಚ್ಚಳ ಮಾಡಲಾಗಿತ್ತು. ಹೊಸ ಹಾಗೂ ಖಾಸಗಿ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು 400ರಿಂದ 600ಕ್ಕೆ ಹೆಚ್ಚಿಸಲಾಗಿತ್ತು. ಇದರ ಜತೆಗೆ ಅಂಕಪಟ್ಟಿ ವಿತರಣೆ, ಪರಿಶೀಲನೆ ಸೇರಿದಂತೆ ವಿವಿಧ ಸೇವೆಗಳ ಶುಲ್ಕಗಳನ್ನೂ ಪರಿಷ್ಕರಿಸಲಾಗಿತ್ತು.

ವೆಚ್ಚ ಹೆಚ್ಚಳವೇ ಕಾರಣ : ಆದರೆ, ಪರೀಕ್ಷಾ ಶುಲ್ಕ ಪರಿಷ್ಕರಣೆಗೆ ಪರೀಕ್ಷೆ ನಡೆಸುವ ವೆಚ್ಚದಲ್ಲಿ ಆಗಿರುವ ಹೆಚ್ಚಳವೇ ಕಾರಣ ಎಂದು ಕೆಎಸ್‌ಇಎಬಿ ಸುತ್ತೋಲೆಯಲ್ಲಿ ಸ್ಪಷ್ಟಪಡಿಸಿದೆ.

ಸಾರ್ವಜನಿಕರ ದೂರು ಮರುಕಳಿಸಿದರೆ ಕ್ರಮ ಅನಿವಾರ್ಯ: ಅಧಿಕಾರಿಗಳಿಗೆ ಡಿಕೆ ಶಿವಕುಮಾರ್ ಖಡಕ್ ಸೂಚನೆ!

ನೈಜ್ಯ ದೆಸೆ ನ್ಯೂಸ್

ತಾಂಡವಪುರ ಅಕ್ಟೋಬರ್ 3ಜನರ ಮನೆ ಬಾಗಿಲಿಗೆ ಸರ್ಕಾರ ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ. ಸಾರ್ವಜನಿಕರ ಯಾವುದೇ ಸಮಸ್ಯೆಗಳಾಗಲಿ ಕೂಡಲೆ ಸ್ಪಂದಿಸಿ,

ಜನರಿಂದ ಮತ್ತೆ ದೂರಗಳು ಕೇಳಿ ಬಂದರೆ ಕ್ರಮ ಕೈಗೊಳ್ಳಲಾಗುವುದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೂಚನೆ ನೀಡಿದರು ಅವರು ಇಂದು ಮೈಸೂರು ಜಿಲ್ಲೆ ಆಡಳಿತ ವತಿಯಿಂದ ಪಿರಿಯಾಪಟ್ಟಣ ತಾಲ್ಲೂಕು ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 'ಪ್ರಜಾಸೇವಾ ಅಭಿಯಾನ' ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿಗಳು ಸ್ಥಳದಲ್ಲಿ ಇದ್ದ ಸಾರ್ವಜನಿಕರನ್ನು ಕರೆದು ನಿಮ್ಮ ಸಮಸ್ಯೆ ಏನು ಎಂದು ಹೇಳಿದಾಗ ಸಾರ್ವಜನಿಕರು ತಮ್ಮ ಹಲವಾರು ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಬಳಿ ಹೇಳಿಕೊಂಡರು ಕೆಲವು ಪೊಲೀಸ್ ಇಲಾಖೆಯ



ಸಮಸ್ಯೆಗಳು ಮುಂತಾದ ಸಮಸ್ಯೆಗಳನ್ನು ಸಾರ್ವಜನಿಕರು ಮುಖ್ಯಮಂತ್ರಿಗಳಲ್ಲಿ ವಿನಿಮಯ ಮಾಡಿಕೊಂಡು ಸಮಸ್ಯೆ ಆಲಿಸಿದ ಮುಖ್ಯಮಂತ್ರಿಗಳು ಸಾರ್ವಜನಿಕರು ಯಾವುದೇ ದೂರುಗಳನ್ನು ನೀಡಿದರೆ ಕೂಡಲೇ ಅದನ್ನು ಪರಿಗಣಿಸಿ ಕ್ರಮ ಕೈಗೊಳ್ಳಿ ಎಂದು ಅಧಿಕಾರಿಗಳನ್ನು ತೆಗೆದುಕೊಳ್ಳುವ ಮೂಲಕ ಖಡಕ್ ಸೂಚನೆ ನೀಡಿದರು

ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಈ ಅಭಿಯಾನವು ಸರ್ಕಾರ ಮತ್ತು ಜನರ ನಡುವಿನ ಅಂತರವನ್ನು ಕಡಿಮೆ ಮಾಡಿ, ಆಡಳಿತವನ್ನು ಜನರ ಮನೆಬಾಗಿಲಿಗೆ ಕೊಂಡೊಯ್ಯುವ ಮಹತ್ವದ ಹೆಜ್ಜೆಯಾಗಿದೆ. ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಸ್ ಯತೀಂದ್ರ ಸಿದ್ರಾಮಯ್ಯನವರು ಮಾತನಾಡಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನೇತೃತ್ವದ ಸರ್ಕಾರವು ಸರ್ಕಾರವೇ ಜನರ ಬಳಿಗೆ ಹೋಗಿ ಜನರ ಸಮಸ್ಯೆಗಳನ್ನು ಆಲಿಸಬೇಕು ಎಂದು ಈ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ ಸಚಿವರು ಸರ್ಕಾರಿ ಕಚೇರಿಗಳಿಗೆ ಜನರು ಅಲೆಯುವ ಬದಲು,

ಸರ್ಕಾರವೇ ಜನರ ಬಳಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸಿ, ಅರ್ಹ ಫಲಾನುಭವಿಗಳಿಗೆ ಸರ್ಕಾರಿ ಯೋಜನೆಗಳ ಪ್ರಯೋಜನ ತಲುಪಿಸುವುದು ಹಾಗೂ ಸಾರ್ವಜನಿಕರ ಅಹವಾಲುಗಳಿಗೆ ನಿಗದಿತ ಅವಧಿಯಲ್ಲಿ ಪರಿಹಾರ ಒದಗಿಸುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಎಂದು ಹೇಳಿದರು ಸರ್ಕಾರದ ಸೇವೆಗಳನ್ನು ಸುಲಭವಾಗಿ ಜನ-ರಿಗೆ ತಲುಪಿಸುವ ಸೇವಾ ಒನ್ ಪೋರ್ಟಲ್, ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ಯುವಜನರ ಅಭಿವೃದ್ಧಿಗಾಗಿ ಭಾರತ್ ಜೋಡೋ ಸಂಘಗಳು, ರೈತರಿಗಾಗಿ 'ನೇಗಿಲ ಯೋಗಿ' ಮತ್ತು 'ರೈತ ಚೈತನ್ಯ' ಕಾರ್ಯಕ್ರಮಗಳು, ವಸತಿ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ 5 ಲಕ್ಷ ನಿವೇಶನಗಳ ಹಂಚಿಕೆ ಹಾಗೂ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ಕ್ರಮಗಳ ಕುರಿತು ಕಾರ್ಯಕ್ರಮದಲ್ಲಿ ವಿವರಿಸಲಾಯಿತು.

ಜನಕೇಂದ್ರಿತ ಆಡಳಿತ, ತ್ವರಿತ ಸೇವೆ ಮತ್ತು ಸಮಗ್ರ ಅಭಿವೃದ್ಧಿಯ ಮೂಲಕ ಜನರ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ತರುವುದು ಸರ್ಕಾರದ ಬದ್ಧತೆಯಾಗಿದೆ. ಎಂದು ಸಚಿವರು ತಿಳಿಸಿದರು ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಈಶ್ವರ್ ಖಂಡ್ರೆ, ರಾಜ್ಯಸಭಾ ಸದಸ್ಯರಾದ ಜಿ.ಸಿ. ಚಂದ್ರಶೇಖರ್, ಶಾಸಕರಾದ ಕೆ. ವೆಂಕಟೇಶ್, ಡಿ. ರವಿಶಂಕರ್, ಅನಿಲ್ ಚಿಕ್ಕಮಾದು, ವಿಧಾನ ಪರಿಷತ್ ಸದಸ್ಯರಾದ ಡಾ. ಡಿ. ತಿಮ್ಮಯ್ಯ, ಹಿರಿಯ ಪತ್ರಕರ್ತರಾದ ಕೆ ಶಿವಕುಮಾರ್ ಜಿಲ್ಲಾಧಿಕಾ-ರಿಗಳಾದ ಜಿ ಲಕ್ಷ್ಮಿಕಾಂತ್ ರೆಡ್ಡಿ ಹಾಗೂ ತಾಲೂಕಿನ ವಿವಿಧ ಇಲಾಖೆ ಅಧಿಕಾರಿಗಳು ಕಾಂಗ್ರೆಸ್ ಪಕ್ಷದ ಮುಖಂಡರುಗಳು ಜನಪ್ರತಿನಿಧಿಗಳು ಹಾಗೂ ಹಿರಿಯ ಅಧಿಕಾರಿಗಳು ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101